ಕನ್ನಡ ದಿನಪತ್ರಿಕೆ

# ಬೆಳಗಾವಿ ವರದಿ

03 ಮೇ । ಶುಕ್ರವಾರ
03 MAY 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 65 ಪುಟ – 4 RNI. KARKAN/2020/79084 ADVRT EMAIL. BELAGAVIVARADIEDITOR@GMAIL.COM NEWSBELAGAVI@GMAIL.COM 9900332089 REG.NO G-2/PMG/KA/NK/BM/139/2024-26




## ಪ್ರಜ್ವಲ್ ತಪ್ಪಿಸಿಕೊಳ್ಳೋ ಚಾನ್ಸೇ ಇಲ್ಲ: ಸಚಿವ ಡಾ.ಜಿ ಪರಮೇಶ್ವರ್

ಹಾಸನ: ಅಶ್ಲೀಲ ವಿಡಿಯೋ ವೈರಲ್ ಹಾಗೂ ಪೆನ್‌ಡ್ರೈವ್ ಪ್ರಕರಣಕ್ಕೆ ರಾಜ್ಯ ಸರ್ಕಾರ ಮತ್ತೊಂದು ಮೆಗಾ ಟ್ವಿಸ್ಟ್ ಕೊಟ್ಟಿದೆ. ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ಈ ಪ್ರಕರಣ ಅಂತರಾಷ್ಟ್ರೀಯ ಮಟ್ಟಕ್ಕೆ ತಲುಪಿದೆ. ಇದೂ ಬಹಳ ಗಂಭೀರವಾದ ವಿಷಯ. ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ತಪ್ಪಿಸಿಕೊಳ್ಳಲು ಅವಕಾಶವೇ ಇಲ್ಲ ಎಂದಿದ್ದಾರೆ. ಸ

ಸಂತ್ರಸ್ತೆಯಿಂದ ದೂರು ಬಂದ ಕೂಡಲೇ ರಾಜ್ಯ ಸರ್ಕಾರ ಮತ್ತು ಪೊಲೀಸ್ ಇಲಾಖೆ ಸಿಐಡಿಗೆ ವಹಿಸಿ ಎಸ್‌ಐಟಿ ತನಿಖೆಗೆ ಕೊಟ್ಟಿದೆ. ಪ್ರಜ್ವಲ್ ರೇವಣ್ಣ ಅವರು ರಾತ್ರೋರಾತ್ರಿ ವಿದೇಶಕ್ಕೆ ಹೋಗಿದ್ದಾರೆ. ಸೆಕ್ಷನ್ 41(ಂ) ಪ್ರಕಾರ ನೋಟಿಸ್ ನೀಡಿದ್ದು, 24 ಗಂಟೆ ಒಳಗಡೆ ವಿಚಾರಣೆಗೆ ಬರಕಾಗುತ್ತೆ. ಅವರು ಬರದೆ ಹೋದ್ರೆ ಕಾನೂನು ಪ್ರಕಾರ ಅರೆಸ್ಟ್ ಮಾಡಬೇಕಾಗುತ್ತೆ. ಪ್ರಜ್ವಲ್ ರೇವಣ್ಣಗೆ ಲುಕ್ ಔಟ್ ನೋಟೀಸ್ ಕೂಡ ಕೊಡಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.

ಇದೇ ವೇಳೆ, ಸಂತ್ರಸ್ತ ಮಹಿಳೆಯರ ಹೇಳಿಕೆಗಳನ್ನ ರೆಕಾರ್ಡ್ ಮಾಡಲಾಗಿದೆ. ನಿನ್ನೆ ಇನ್ನೊಬ್ಬ ಮಹಿಳೆ ಕೂಡ ದೂರು ಕೊಟ್ಟಿದ್ದಾರೆ. ಈ ಪ್ರಕರಣದಲ್ಲಿ ಭಾಗಿಯಾಗಿರುವ ಮಹಿಳೆಯರಿಗೆ ಸರ್ಕಾರ ರಕ್ಷಣೆ ಕೊಡುತ್ತೆ. ಇದರಲ್ಲಿ ಮಹಿಳೆಯರ ಭವಿಷ್ಯ, ಅವರು ಕುಟುಂಬಗಳ ಭವಿಷ್ಯ ಅಡಗಿದೆ. ಹೀಗಾಗಿ ಸರ್ಕಾರ ಈ ವಿಷಯವನ್ನು ಬಹಳ ಗಂಭೀರವಾಗಿ ತೆಗೆದುಕೊಂಡಿದೆ ಎಂದು ಗೃಹ ಸಚಿವರು ತಿಳಿಸಿದ್ದಾರೆ.

## ಸಂಸದ ಪ್ರಜ್ವಲ್ ರೇವಣ್ಣಗೆ ಲುಕೌಟ್ ನೋಟಿಸ್ ಜಾರಿ



ಬೆಂಗಳೂರು: ಅಶ್ಲೀಲ ವೀಡಿಯೋ ಪ್ರಕರಣ ಸಂಬಂಧ ಸಂಸದ ಪ್ರಜ್ವಲ್ ರೇವಣ್ಣಗೆ ಲುಕೌಟ್ ನೋಟಿಸ್ ಜಾರಿ ಮಾಡಲಾಗಿದೆ.

ವಿಮಾನ ನಿಲ್ದಾಣದ ಇಮಿಗ್ರೇಷನ್ ಲುಕೌಟ್ ನೋಟಿಸ್ ಸರ್ವ್ ಮಾಡಲಾಗಿದೆ. ಎಲ್ಲಾ ವಿಮಾನ ನಿಲ್ದಾಣದ ಇಮಿಗ್ರೇಷನ್ ವಿಭಾಗಕ್ಕೆ ಎಸ್‌ಐಟಿ ಅಧಿಕಾರಿಗಳು ಲುಕೌಟ್ ನೋಟಿಸ್ ತಲುಪಿಸಿದ್ದಾರೆ. ಈ ಮೂಲಕ ಲೊಕೇಟ್ ಆದ ಕೂಡಲೇ ವಶಕ್ಕೆ ಪಡೆಯಲು ಸೂಚನೆ ನೀಡಿದ್ದಾರೆ. ಸಮಯ ಕೇಳಿದ್ದ ಪ್ರಜ್ವಲ್: ವಿಚಾರಣೆಗೆ ಹಾಜರಾಗಲು 7 ದಿನ ಅವಕಾಶ ನೀಡುವಂತೆ ಕೋರಿ ಪ್ರಜ್ವಲ್ ರೇವಣ್ಣ ವಿಶೇಷ ತನಿಖಾ ತಂಡಕ್ಕೆ ಮನವಿ ಮಾಡಿದ್ದಾರೆ. ಪ್ರಜ್ವಲ್ ರೇವಣ್ಣ ಪರ ವಕೀಲ ಅರುಣ್ ಜಿ ಅವರು ಎಸ್‌ಐಟಿ ಮುಖ್ಯಸ್ಥರಿಗೆ ಪತ್ರ ಬರೆದು ಮನವಿ ಸಲ್ಲಿಸಿದ್ದರು. ಇತ್ತ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ ಪ್ರಜ್ವಲ್ ರೇವಣ್ಣ ವಿಚಾರಣೆಗೆ ಹಾಜರಾಗಲು ನಾನು ಬೆಂಗಳೂರಿನಲ್ಲಿ ಇಲ್ಲದ ಕಾರಣ, ನಾನು ನನ್ನ ವಕೀಲರ ಮೂಲಕ ಮನವಿ ಸಲ್ಲಿಸಿದ್ದೇನೆ. ಸತ್ಯ ಆದಷ್ಟು ಬೇಗ ಹೊರಬರಲಿದೆ ಎಂದು ತಿಳಿಸಿದ್ದರು.

ಪ್ರಕರಣ: ಏಪ್ರಿಲ್ 21ರಂದು ಸ್ಫೋಟಗೊಂಡ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ವೀಡಿಯೋಗಳಲ್ಲಿ ಹಲವಾರು ಮಹಿಳೆಯರ ಅಶ್ಲೀಲ ವೀಡಿಯೋ ಎಲ್ಲೆಡೆ ಹರಿದಾಡುತ್ತಿವೆ. ಇದುವರೆಗೂ ಓರ್ವ ಸಂತ್ರಸ್ತೆ ಮಾತ್ರ ದೂರು ನೀಡಿದ್ದು, ಕಳೆದ ಎರಡು ದಿನಗಳಿಂದ ಬೆಂಗಳೂರಿನಲ್ಲಿ ಅವರ ಹೇಳಿಕೆಯನ್ನು ಪಡೆದುಕೊಳ್ಳಲಾಗಿದೆ. ಅವರ ಹೇಳಿಕೆ ವೀಡಿಯೋ ರೆಕಾರ್ಡ್ ಮಾಡಿಕೊಂಡಿರುವ ಎಸ್‌ಐಟಿ ಅಧಿಕಾರಿಗಳು ಯಾವ ಕ್ಷಣದಲ್ಲಾದರೂ ಸಂತ್ರಸ್ತೆಯ ಕರೆತಂದು ಸ್ಥಳ ಮಹಜರು ಮಾಡಲಿದ್ದಾರೆ. ಹೊಳೆನರಸೀಪುರದ ಎಚ್.ಡಿ.ರೇವಣ್ಣ ಅವರ ನಿವಾಸದಲ್ಲಿ ಲೈಂಗಿಕ ದೌರ್ಜನ್ಯ ನಡೆಸಲಾಗಿದೆ ಎಂದು ದೂರಿನಲ್ಲಿ ಸಂತ್ರಸ್ತೆ ಆರೋಪಿಸಿದ್ದರು. ಈ ನಡುವೆ ಪ್ರಜ್ವಲ್ ರೇವಣ್ಣ ವಿದೇಶಕ್ಕೆ ಹಾರಿದ್ದರು.

# ಬೆಳಗಾವಿಯನ್ನು ಮೆಟ್ರೋ ನಗರ ಮಾಡುವ ಗುರಿ: ಜಗದೀಶ್ ಶೆಟ್ಟರ್

ಬೆಳಗಾವಿ: ನಾನು ಲೋಕಸಭೆಗೆ ಆಯ್ಕೆಯಾದ ಬಳಿಕ ಬೆಳಗಾವಿಯನ್ನು ಮಾದರಿ ನಗರ ಮಾಡುವ ಗುರಿ ಹೊಂದಿದ್ದೇನೆ. ಬೆಳಗಾವಿ ನಗರವನ್ನು ಮೆಟ್ರೋ ನಗರ ಮಾಡಬೇಕು. ಬೆಳಗಾವಿ ಅಭಿವೃದ್ಧಿಗಾಗಿ ಹಿಂದೆ ಕೂಡಾ ಶ್ರಮಿಸಿದ್ದೇನೆ. ಹಾಗಾಗಿ ಪ್ರಮಾಣದ ಮಾಡಿ ಹೇಳುವೆ, ಬೆಂಗಳೂರು ಬಿಟ್ಟು ಬೆಳಗಾವಿಯನ್ನು ಸೆಂಟರ್ ಸ್ಥಳವನ್ನಾಗಿ ಮಾಡುವ ಗುರಿ ಇದೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ತಿಳಿಸಿದರು.




ಲೋಕಸಭಾ ಚುನಾವಣೆಯ ಅಂಗವಾಗಿ ಬೆಳಗಾವಿ ಉತ್ತರ ಮತಕ್ಷೇತ್ರದ ಶಾಹು ನಗರದಲ್ಲಿ ಬಹಿರಂಗ ಸಭೆ ನಡೆಸಿ ಮತಯಾಚನೆ ಮಾಡಿ, ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರು ಉತ್ತಮ ಸ್ಪಂದನ ನೀಡುತ್ತಿದ್ದಾರೆ. ಹಾಗಾಗಿ ಬ್ಯಾಲೆಟ್ ಪೇಪರ್ ನಲ್ಲಿ ಎರಡನೆ ನಂಬರ್ ಗೆ ಮತ ನೀಡಿ, ಹೆಚ್ಚಿನ ಮತಗಳಿಂದ ಗೆಲ್ಲಿಸಬೇಕು ಎಂದು ಕರೆ ನೀಡಿದರು.

ದಿ. ಸುರೇಶ್ ಅಂಗಡಿಯವರು ಅವರು ಅನೇಕ ಅಭಿವೃದ್ಧಿ ಕೆಲಸ ಮಾಡಿದ್ದಾರೆ. ದಿ.ಸುರೇಶ್ ಅಂಗಡಿ ಅವರು ಅಂ–ದುಕೊಂಡಿದ್ದ ಅನೇಕ ಕೆಲಸಗಳು ಮಾಡುವುದು ಬಾಕಿ ಇದೆ. ಹಾಗಾಗಿ ಬಿಜೆಪಿ ಚಿನ್ಹೆಗೆ ಮತ ನೀಡಿ ಗೆಲ್ಲಿಸಬೇಕು ಎಂದು ಜಗದೀಶ್ ಶೆಟ್ಟರ್ ಅವರು ಕರೆ ನೀಡಿದರು.

ಬಿಜೆಪಿ ರಾಜ್ಯ ಉಪಾದ್ಯಕ್ಷ ಅನೀಲ ಬೆನಕೆ ಅವರು ಮಾತನಾಡಿ, ಜಗದೀಶ್ ಶೆಟ್ಟರ್ ಅವರಿಗೆ ರಾಜಕೀಯ ಹಾಗೂ ಆಡಳಿತದ ಅನುಭವ ಹೆಚ್ಚು ಇದೆ. ಅಂತಹ ವ್ಯಕ್ತಿಗೆ ಮತ ನೀಡಬೇಕು ಯಾವುದೇ ಪರಿಸ್ಥಿತಿ ಇದ್ದರು ಮೋದಿಯವರು ಮತ್ತೆ ಪ್ರಧಾನಿ ಆಗಬೇಕು. ಹಾಗಾಗಿ ಜಗದೀಶ್ ಶೆಟ್ಟರ್ ಅವರಿಗೆ ಹೆಚ್ಚಿನ ಮತ ನೀಡಿ ಗೆಲ್ಲಿಸಬೇಕು ಎಂದು ಕರೆ ನೀಡಿದರು.

ದೇಶದಲ್ಲಿ 500 ವರ್ಷದಲ್ಲಿ ರಾಮ ಮಂದಿರ ಆಗಲಿಲ್ಲ. ರಾಮ ಮಂದಿರ ಆಗಬಾರದು ಎಂದು ಕಾಂಗ್ರೆಸ್ ಕುತಂತ್ರ ಮಾಡಿತು. ಆದರೆ ಮೋದಿ ಆಡಳಿತದಲ್ಲಿ ರಾಮ ಮಂದಿರ ನಿರ್ಮಾಣ ಮಾಡಿ ಉದ್ಘಾಟನೆ ಕೂಡಾ ಮಾಡಿದರು. ಒಂದು ಕಡೆ ದೇಶ ಮತ್ತು ಧರ್ಮಕ್ಕಾ ಹೋರಾಟ ಮಾಡುವ ಪ್ರಧಾನಿ ಆದರೆ ಇನ್ನೊಂದು ಕಡೆ ಪಾಕಿಸ್ಥಾನ ಜೈ ಎನ್ನುವ ಪಕ್ಷ ಒಂದು ಕಡೆ ಇದೆ. ಮುಂದೆ ದೇಶದಲ್ಲಿ ಅನೇಕ ಬದಲಾವಣೆ ಆಗುತ್ತದೆ.

ದೇಶ ವಿಶ್ವಗುರು ಆಗುತ್ತದೆ ಹಾಗಿ ಜಗದೀಶ್ ಶೆಟ್ಟರ್ ಅವರಿಗೆ ಮತ ನೀಡಿ ಗೆಲ್ಲಿಸಬೇಕು ಎಂದು ಅನಿಲ ಬೆನಕೆ ಅವರು ಕರೆ ನೀಡಿದರು.

ಈ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ. ಮಂಡಳ ಅಧ್ಯಕ್ಷ ವಿಜಯ ಕೊಡಗನವರ್, ಪಾಲಿಕೆ ಸದಸ್ಯ ಶ್ರೇಯಸ್ ನಾಕಾಡಿ, ಮಾಜಿ ಉಪ ಮೇಯರ್ ರೇಶ್ಮಾ ಪಾಟೀಲ್, ಯುವ ಮುಖಂಡ ಸಂಕಲ್ಪ ಶೆಟ್ಟರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಡಿವೈಎಸ್ಪಿ ಕೆ. ಪೂಜಾರಿಗೆ ರಿಲೀಫ್



ಬೆಂಗಳೂರು: ಬಿಟ್ ಕಾಯಿನ್ ಕೇಸ್ನಲ್ಲಿ ಆರೋಪಿಗಳಿಗೆ ಸಹಾಯ ಆರೋಪ ಎದು–ರಿಸುತ್ತಿದ್ದ ಡಿವೈಎಸ್ಪಿ ಶ್ರೀಧರ್ ಕೆ. ಪೂಜಾರ್ಗೆ ಇದೀಗ ಬಿಗ್ ರಿಲೀಫ್ ಸಿಕ್ಕಿದೆ. ಘೋಷಿತ ಆರೋಪಿ ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದೆ. ವಿಚಾರಣೆಗೆ ಸಹಕ–ರಿಸದೇ ತಲೆಮರೆಸಿಕೊಂಡ ಹಿನ್ನೆಲೆ ವಿಚಾರಣಾ ನ್ಯಾಯಾಲಯದಿಂದ ಘೋಷಿತ ಆರೋಪಿ ಎಂದು ವಾರಂಟ್ ಜಾರಿ ಮಾಡಲಾಗಿತ್ತು. ವಾರಂಟ್ ಪ್ರಶ್ನಿಸಿ ಇತ್ತೀಚೆಗೆ ಶ್ರೀಧರ್ ಕೆ. ಪೂಜಾರ್ ಹೈಕೋರ್ಟ್ಗೆ ಅರ್ಜಿ ಸಲ್ಲಿಸಿದ್ದರು. ಆರೋಪಿ ತನಿಖೆಗೆ ಸಹಕರಿಸುವುದಾಗಿ ಹಿರಿಯ ವಕೀಲ ಅರುಣ್ ಶ್ಯಾಮ್ ಭರವಸೆ ನೀಡಿದ್ದಾರೆ. ಮೇ 8ರಂದು ಬೆಳಗ್ಗೆ 9 ಗಂಟೆಗೆ ತನಿಖಾಧಿಕಾರಿಗಳ ಮುಂದೆ ಹಾಜರಾಗಬೇಕು. ಬೆಳಗ್ಗೆ 9ರಿಂದ ಸಂಜೆ 6ರವರೆಗೆ ಕಸ್ಟಡಿಗೆ ಪಡೆದು ತನಿಖೆ ನಡೆಸಬೇಕು. ನಂತರ 2 ಲಕ್ಷ ರೂ. ಬಾಂಡ್ ಪಡೆದು ಬಿಡುಗಡೆ ಮಾಡಬೇಕು. ಪೊಲೀಸರ ತನಿಖೆಗೆ ಆರೋಪಿ ಶ್ರೀಧರ್ ಕೆ. ಪೂಜಾರ್ ಸಹಕರಿಸಬೇಕು. ಜಾಮೀನು ಅರ್ಜಿ ಸಲ್ಲಿಸಿದ್ದರೆ ಪೊಲೀಸರು ಆಕ್ಷೇಪಿಸಬಾರದು ಎಂದು ನ್ಯಾ.ವಿ.ಶ್ರೀಶಾನಂದ ಅವರಿದ್ದ ಹೈಕೋರ್ಟ್ ಪೀಠ ಆದೇಶ ಹೊರಡಿಸಿದೆ.

## ಗುಜರಾತ್ ನಲ್ಲಿ ಪಾರ್ಸಲ್ ಬಾಂಬ್ ಗೆ ತಂದೆ ಮಗಳು ಸಾವು



ಅಹ್ಮದಾಬಾದ್: ಗುಜರಾತ್ ನ ಸಬರ್ಕಾಂತ ಜಿಲ್ಲೆಯಲ್ಲಿ ಬಾರ್ಸಲ್ ಬಾಂಬ್ ಸ್ಫೋಟಗೊಂಡಿದ್ದು ತಂದೆ ಮಗಳು ಸಾವನ್ನಪ್ಪಿದ್ದಾರೆ.

ಅಪರಿಚಿತ ವ್ಯಕ್ತಿಯೋರ್ವ ತಂದುಕೊಟ್ಟ ಎಲೆಕ್ಟ್ರಾನಿಕ್ ವಸ್ತು ಸಿಡಿದ ಪರಿಣಾಮ ಈ ಅನಾಹುತ ನಡೆದಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

ತಮಿಳುನಾಡಿನ ಕಲ್ಲು ಕ್ವಾರಿಯಲ್ಲಿ ಭಾರೀ ಸ್ಫೋಟ, ಮೂವರ ಸಾವು, ಹಲವ–ರಿಗೆ ಗಾಯ

ಪಾರ್ಸಲ್ ತಂದು ಕೊಟ್ಟ ವ್ಯಕ್ತಿಯ ಬಗ್ಗೆ ಮಾಹಿತಿ ಬಹಿರಂಗವಾಗಿಲ್ಲ. ಎಲೆಕ್ಟ್ರಾನಿಕ್ ವಸ್ತುವನ್ನು ಚಾಲೂ ಮಾಡಿದ ಬೆನ್ನಲ್ಲೇ ಅದು ಸ್ಫೋಟಗೊಂಡಿದೆ ಎಂದು ಸ್ಥಳೀಯ ಅಧಿಕಾರಿಗಳು ಹೇಳಿದ್ದಾರೆ.

ಜಿತು ವಂಝಾರ (33) ಸ್ಥಳದಲ್ಲೇ ಮೃತಪಟ್ಟರೆ, ಗಾಯಗೊಂಡ ಮೂವರು ಬಾಲಕಿಯರನ್ನು ವಡಾಲಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಮತ್ತು ಅಲ್ಲಿಂದ ಹಿಮತ್‌ನಗರ ಸಿವಿಲ್ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಆಸ್ಪತ್ರೆಯಲ್ಲಿ ಬಾಲಕಿ ಮೃತಪಟ್ಟಿದ್ದಾರೆ. ಆಕೆಯ ಸಹೋದರಿ ಹಾಗೂ ಸೋದರ ಸಂಬಂಧಿ ಇಬ್ಬರೂ ತೀವ್ರವಾಗಿ ಗಾಯಗೊಂಡಿದ್ದು ಚಿಕಿತ್ಸೆ ಮುಂದುವರೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗಾಯಗೊಂಡ ಬಾಲಕಿಯರ ಸ್ಥಿತಿ ಗಂಭೀರವಾಗಿದ್ದು, ವೆಂಟಿಲೇಟ–ರ್‌ನಲ್ಲಿ ಇರಿಸಲಾಗಿದೆ ಎಂದು ಸಹಾಯಕ ನಿವಾಸಿ ವೈದ್ಯಾಧಿಕಾರಿ ವಿಪುಲ್ ಜಾನಿ ತಿಳಿಸಿದ್ದಾರೆ. ಆಟೋರಿಕ್ಷಾದಲ್ಲಿ ಪಾರ್ಸಲ್ ತಲುಪಿಸಲಾಗಿದೆ ಎಂದು ಸಂತ್ರಸ್ತರ ಸಂಬಂಧಿಯೊಬ್ಬರು ತಿಳಿಸಿದ್ದಾರೆ. ಕುಟುಂಬವು ವಸ್ತುವನ್ನು ಆರ್ಡರ್ ಮಾಡಿದ್ದರೇ? ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದುಅಧಿಕಾ–ರಿಗಳು ತಿಳಿಸಿದ್ದಾರೆ.

## ಹಿಟ್ ಅಂಡ್ ರನ್: ಅಪಘಾತದಲ್ಲಿ ಸುರೇಶ್ ರೈನಾ ಸೋದರ ಸಂಬಂಧಿ ಸಾವು



ಧರ್ಮಶಾಲಾ: ಮಾಜಿ ಕ್ರಿಕೆಟಿಗ ಸುರೇಶ್ ರೈನಾ ಅವರ ಸೋದರಸಂಬಂಧಿ ಹಿಟ್ ಅಂಡ್ ರನ್ ಘಟನೆಯಲ್ಲಿ ಸಾವನ್ನಪ್ಪಿದ್ದು, ಅದೇ ಸ್ಕೂಟರ್ ನಲ್ಲಿದ್ದ ಮತ್ತೊಬ್ಬ ವ್ಯಕ್ತಿಯ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ರೈನಾ ಅವರ ಸೋದರ ಸಂಬಂಧಿ ಸೌರಭ್ ಕುಮಾರ್ ಮತ್ತು ಅವರ ಸ್ನೇಹಿತ ಕುತ್ಮಾನ್‌ನ ಶುಭಂ ಅವರು ತೆರಳುತ್ತಿದ್ದ ಸ್ಕೂಟರ್ ಗೆ ಬುಧವಾರ ಗಗ್ಗಲಿ ವಿಮಾನ ನಿಲ್ದಾಣದ ಬಳಿ ಕಾರು ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ಹೇಳಿದ್ದಾರೆ.


ಗಗ್ಗಲ್‌ನ ಹಿಮಾಚಲ ಟಿಂಬರ್ ಬಳಿ ಬುಧವಾರ ರಾತ್ರಿ 11:30 ರ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಕಂಗ್ರಾ ಪೊಲೀಸ್ ವರಿಷ್ಠಾಧಿಕಾರಿ ಶಾಲಿನಿ ಅಗ್ನಿಹೋತ್ರಿ ಅವರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಕಾರಿನ ಚಾಲಕ ಶೇರ್ ಸಿಂಗ್ ಬೈಕ್ ಗೆ ಡಿಕ್ಕಿ ಹೊಡೆಸಿ, ಸ್ಥಳದಿಂದ ಪರಾರಿಯಾಗಿದ್ದರು. ಆದರೆ ಘಟನೆ ನಂತರ ಸಿಸಿಟಿವಿ ದೃಶ್ಯಾವಳಿಗಳ ಸಹಾಯದಿಂದ ಶೇರ್ ಸಿಂಗ್ ಅವರನ್ನು ಮಂಡಿಯಲ್ಲಿ ಬಂಧಿಸಲಾಗಿದೆ. ಆರೋಪಿಯ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 279 (ಅತಿ ವೇಗದ ಚಾಲನೆ) ಮತ್ತು 304 ಎ (ನಿರ್ಲಕ್ಷ್ಯದಿಂದ ಸಾವಿಗೆ ಕಾರಣ) ಮೋಟಾರು ವಾಹನ ಕಾಯ್ದೆಯ ಸೆಕ್ಷನ್ 187 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಮೋದಿ ಫೋಟೋ ಬಳಕೆಗೆ ಅವಕಾಶ ಸಿಕ್ಕಿದೆ, ದೂರು ನೀಡಿದವರಿಗೆ ಮುಖಭಂಗವಾಗಿದೆ: ಕೆಎಸ್ ಈಶ್ವರಪ್ಪ

ಶಿವಮೊಗ್ಗ: ಮೋದಿ ಫೋಟೊ ಬಳಕೆಗೆ ನನಗೆ ಅವಕಾಶ ಸಿಕ್ಕಿದ್ದು, ದೂರು ನೀಡಿದ್ದವರಿಗೆ ಮುಖಭಂಗವಾಗಿದೆ ಎಂದು ಕೆಎಸ್ ಈಶ್ವರಪ್ಪ ಅವರು ಗುರುವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ನರೇಂದ್ರ ಮೋದಿ ಫೋಟೋ ಬಳಸಬಾರದು ಎಂದು ಬಿಜೆಪಿ ನಾಯಕರು ಚುನಾವಣಾ ಆಯೋಗಕ್ಕೆ ದೂರು ನೀಡಿದ್ದರು. ಆದರೆ, ಇದೀಗ ಮೋದಿ ಫೋಟೋ ಬಳಸಬೇಡಿ ಎಂದು ದೂರು ನೀಡಿದವರಿಗೆ ಮುಖಭಂಗವಾಗಿದೆ. ಮೋದಿಯವರ ಫೋಟೋ ಬಳಕೆಗೆ ನನಗೆ ಅಧಿಕಾರ ಸಿಕ್ಕಿದೆ. ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡುತ್ತೇನೆ. ಈ ಚುನಾವಣೆಯಲ್ಲಿ ಜೀವನ ಪೂರ್ತಿ ಅವರ ಫೋಟೋ ಬಳಸುತ್ತೇನೆ. ನರೇಂದ್ರ ಮೋದಿಯವರ ವಿಚಾರಧಾರೆಯನ್ನು ನಾನು ಎಲ್ಲರಿಗೂ ತಿಳಿಸುತ್ತೇನೆ ಎಂದು ಹೇಳಿದರು.



ಬಹಳ ಸಂತೋಷದ ವಿಷಯವೆಂದರೆ ವಿಶ್ವ ನಾಯಕ ನನ್ನ ಜೊತೆ ಉಳಿದಿರುವುದು. ನರೇಂದ್ರ ಮೋದಿ ನನ್ನ ಜೊತೆ ಉಳಿದರೆ ಅದೇ ನನಗೆ ಆನಂದ. ಈಶ್ವರಪ್ಪ ಮೋದಿ ಪೋಟೋ ಬಳಸುತ್ತಿದ್ದಾರೆಂದು ಬಿಜೆಪಿಯವರು ಕೋರ್ಟ್ಗೆ ಹೋಗಿದ್ದರು. ಚುನಾವಣಾ ಆಯೋಗ, ಕೋರ್ಟ್ ಅವರಿಗೆ ಸೊಪ್ಪು ಹಾಕಲಿಲ್ಲ. ಮೋದಿ ಅವರನ್ನು ನನ್ನ ಹೃದಯದಲ್ಲಿ ಇಟ್ಟುಕೊಂಡಿದ್ದೇನೆ. ಮೋದಿಯವರಿಗೆ ಅಪಮಾನ ಮಾಡಬಾರದು. ಗಣಪತಿ, ಈಶ್ವರನನ್ನು ಎಲ್ಲರೂ ಪೂಜೆ ಮಾಡುತ್ತಾರೆ. ನಿಮ್ಮ ಮನೆಯಲ್ಲಿ ಫೋಟೋ ಇಟ್ಟುಕೊಳ್ಳಬೇಡಿ ಅಂದರೆ ಹೇಗೆ? ಮೋದಿ ಅವರು ನನಗೆ ಮಾದರಿ ವ್ಯಕ್ತಿ, ಆದರ್ಶ ವ್ಯಕ್ತಿ. ನನ್ನ ಜೀವನಪೂರ್ತಿ ಮೋದಿ ಫೋಟೋ ಇಟ್ಟುಕೊಳ್ಳುತ್ತೇನೆ. ಯಾವುದೇ ಪಕ್ಷ ಅಥವಾ ವ್ಯಕ್ತಿ ನನ್ನನ್ನು ಮೋದಿಯವರಿಂದ ಬೇರ್ಪಡಿಸಲು ಸಾಧ್ಯವಿಲ್ಲ. ನರೇಂದ್ರ ಮೋದಿ ಫೋಟೋ ಬಳಸಲು ಹಿಂದೂ ಸಮಾಜಕ್ಕೆ ಅವಕಾಶ ಇದೆ. ನಾನು ಚುನಾವಣೆಗೆ ಪೂರ್ಣ ಪ್ರಮಾಣದಲ್ಲಿ ಮೋದಿ ಫೋಟೋ ಬಳಸುತ್ತೇನೆಂದು ತಿಳಿಸಿದರು.

## ಭಾವನಾತ್ಮಕ ವಿಚಾರ ಕೆರಳಿಸಿ ಜನರಿಗೆ ಪ್ರಧಾನಿ ಮೋದಿಯಿಂದ ತಪ್ಪು ಸಂದೇಶ ರವಾನೆ: ಮಾಜಿ ಸಚಿವ ಹೆಚ್.ಎಂ. ರೇವಣ್ಣ

ಚಿಕ್ಕೋಡಿ: ಪ್ರಧಾನಿ ನರೇಂದ್ರ ಮೋದಿಯವರು ನೀಡಿದ್ದ ಭರವಸೆಗಳನ್ನು ಈಡೇರಿಸದಿರುವುದು ಹಾಗೂ ಭಾವನಾತ್ಮಕ ವಿಚಾರಗಳನ್ನು ಕೆರಳಿಸಿ ಜನರನ್ನು ತಪ್ಪು ದಾರಿಗೆಳೆಯುತ್ತಿದ್ದು, ಈ ಲೋಕಸಭೆ ಚುನಾವಣೆಯಲ್ಲಿ ಅವರ ನಿಜ ಬಣ್ಣ ಬಯಲಾಗಲಿದೆ ಎಂದು ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ, ಮಾಜಿ ಸಚಿವ ಹೆಚ್.ಎಂ. ರೇವಣ್ಣ ಹೇಳಿದರು.



ಚಿಕ್ಕೋಡಿ ನಗರದಲ್ಲಿರುವ ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಧರ್ಮ ಹಾಗೂ ಜಾತಿಗಳ ನಡುವೆ ದ್ವೇಷ ಬೆಳೆಸುತ್ತಿದ್ದಾರೆ. ಅವರಿಗೆ ಜನರ ಪ್ರೋತ್ಸಾಹ ದೊರೆಯಬಾರದು. ರಾಜ್ಯದ ಮಹಿಳೆಯರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರಿಗೆ ಶಕ್ತಿ ತುಂಬಲು ಐದು ಗ್ಯಾರಂಟಿಗಳನ್ನು ಕಾಂಗ್ರೆಸ್ ಸರ್ಕಾರ ಜಾರಿ ಮಾಡಿದೆ. ಬಡವರ ಕೈಗೆ ಹಣ ನೀಡಿ ಅವರನ್ನು ಆರ್ಥಿಕವಾಗಿ ಸಬಲರನ್ನಾಗಿಸಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ ಜನರಿಂದ ಪ್ರಶಂಸೆ ದೊರೆತಿದೆ. ಬಡವರ ಕುಟುಂಬಗಳಿಗೆ ತಲಾ 5 ರಿಂದ 6 ಸಾವಿರ ರೂ. ದೊರೆಯುತ್ತಿದೆ. ಕಾಂಗ್ರೆಸ್ ಪಕ್ಷ ಸರ್ವ–ರಿಗೂ ಸಮಪಾಲು, ಸಮಬಾಳು ತತ್ವದಂತೆ ಕೆಲಸ ಮಾಡಿದೆ. ನಾವು ನುಡಿದಂತೆ ನಡೆಯುತ್ತೇವೆ. ಆದರೆ ಬಿಜೆಪಿಯವರು ಕೇವಲ ಕನಸುಗಳನ್ನು ಬಿತ್ತಿ ನನಸು ಮಾಡುವವಲ್ಲಿ ವಿಫಲರಾಗಿದ್ದಾರೆಂದು ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ, ಸಿಎಂ ಸಿದ್ದರಾಮಯ್ಯನವರ ಅಲೆ ಇದೆ. ಆದ–'ರೆ ಪ್ರಧಾನಿ ನರೇಂದ್ರ ಮೋದಿ ಹವಾ ಎಲ್ಲಿಯೂ ಕಾಣುತ್ತಿಲ್ಲ.

ರಾಜ್ಯದಲ್ಲಿ, ದೇಶದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದ್ದಾಗ ಜನತೆಗೆ ಒಳ್ಳೆಯ ಯೋಜನೆಗಳನ್ನು ನೀಡಿದ್ದಾರೆ. ಈ ನಾಡಿಗೆ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರ ಕೊಡುಗೆ ಅಪಾರ. ಎಸ್. ಬಂಗಾರಪ್ಪ ಅವರ ಅವಧಿಯಲ್ಲಿ ಜಾರಿಗೆ ತಂದ ಅಕ್ಷಯ, ಆಶ್ರಯ, ಆರಾಧನಾ, ಗ್ರಾಮೀಣ ಕೃಪಾಂಕ, ಉಚಿತ ವಿದ್ಯುತ್‌ನಂತಹ ಯೋಜನೆಗಳು ಜನತೆಗೆ ಅನುಕೂಲವಾಗಿವೆ ಎಂದು ತಿಳಿಸಿದರು.

ಬಂಗಾರಪ್ಪ ಬರಗಾಲದಲ್ಲಿ ರೈತ–ರಿಗೆ ಉಚಿತ ಬಿತ್ತನೆ ಬೀಜ ನೀಡಿದ್ದರು. ಇಂದಿಗೂ ಅವರು ಜನಮಾನಸದಲ್ಲಿ ಚಿರಸ್ಥಾಯಿಯಾಗಿದ್ದಾರೆ. ಇಂತಹ ಅನೇಕ ಯೋಜನೆಗಳನ್ನು ನೀಡಿದ ಕಾಂಗ್ರೆಸ್ ಪಕ್ಷದ ಪರವಾಗಿ ಮತದಾರರು ಒಲುವು ತೊರುತ್ತಿದ್ದು, ಚಿಕ್ಕೋಡಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಗೆಲ್ಲುವಾ ವಾತಾವರಣ ನಿರ್ಮಾಣವಾಗಿದೆ ಎಂದು ತಿಳಿಸಿರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವೆಂಕಟೇಶ್ ಹೆಗಡೆ, ಬಿಎಂಟಿಸಿ ಉಪಾಧ್ಯಕ್ಷ ಗೋವಿಂದರಾಜು, ರಾಜ್ಯ ಕುರುಬ ಸಂಘದ ಡಾ. ರಾಜೇಂದ್ರ ಸಣ್ಣಕ್ಕಿ, ಕುರುಬ ಸಮಾಜದ ಜಿಲ್ಲಾ ಮುಖಂಡ ನಸಲಾಪೂರೆ ಸೇರಿದಂತೆ ಇತರರು ಇದ್ದರು.

# ಯಾವುದಾದರೂ ರಾಜಕೀಯ ಪಕ್ಷ ಎಸ್‌ಸಿ, ಎಸ್‌ಟಿ. ಓಬಿಸಿ ಮೀಸಲಾತಿಯನ್ನು ಲೂಟಿ ಮಾಡಿದ್ದರೆ, ಅದು ಕಾಂಗ್ರೆಸ್ ಪಕ್ಷ ಮಾತ್ರ: ಅಮಿತ್ ಶಾ

ಲೋಕಸಭೆ ಚುನಾವಣೆಯ ಏಳು ಹಂತಗಳ ಪೈಕಿ ಎರಡು ಹಂತಗಳು ಮುಕ್ತಾಯಗೊಂಡಿದ್ದು, ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಮುಂಬರುವ ಮೂರನೇ ಹಂತದ ಚುನಾವಣೆಯ ಪ್ರಚಾರವನ್ನು ತೀವ್ರಗೊಳಿಸಿದ್ದಾರೆ. ಸಾರ್ವಜನಿಕ ಸಭೆಗಳು ಮತ್ತು ರೋಡ್ಶೋಗಳ ಮೂಲಕ ಶಾ ಅವರು ರಾಜ್ಯಗಳಾದ್ಯಂತ ಜನರೊಂದಿಗೆ ತೊಡಗಿಸಿಕೊಂಡಿದ್ದಾರೆ. ಅಸ್ಸಾಂನ ಗುವಾಹಟಿಯಲ್ಲಿರುವ ಭಾರತೀಯ ಜನತಾ ಪಕ್ಷದ ರಾಜ್ಯ ಕಚೇರಿಯಲ್ಲಿ ನಡೆದ ಪ್ರಮುಖ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅಮಿತ್ ಶಾ, ಸಂವಿಧಾನವನ್ನು ಬದಲಾಯಿಸುವುದು ಮತ್ತು ಮೀಸಲಾತಿಯನ್ನು ಕೊನೆಗೊಳಿಸುವುದು ಸೇರಿದಂತೆ ಬಿಜೆಪಿ ವಿರುದ್ಧ ಕಾಂಗ್ರೆಸ್ ನೇತೃತ್ವದ ಇಂಡಿ ಒಕ್ಕೂಟ ಮಾಡುತ್ತಿರುವ ಸುಳ್ಳು ಸುದ್ದಿಗಳನ್ನು ತಳ್ಳಿಹಾಕಿದರು.

ಕರ್ನಾಟಕ ಮತ್ತು ಆಂಧ್ರಪ್ರದೇಶದ ಕಾಂಗ್ರೆಸ್ ಸರ್ಕಾರವು ಎಸ್ಸಿ, ಎಸ್ಟಿ ಮತ್ತು ಒಬಿಸಿ ಹಕ್ಕುಗಳ ವಿರುದ್ಧ ಕೆಲಸ ಮಾಡಿ, ಅಸಂವಿಧಾನಿಕ ರೀತಿಯಲ್ಲಿ ಧರ್ಮದ ಆಧಾರದ ಮೇಲೆ ಮೀಸಲಾತಿಯನ್ನು ನೀಡಿತು. ಅಂತ್ಯೋದಯ ರಾಜಕೀಯವನ್ನು ಪ್ರತಿಪಾದಿಸುವ ಅಮಿತ್ ಶಾ, ಧರ್ಮಾಧಾ–ರಿತ ಮೀಸಲಾತಿ ಅಸಾಂವಿಧಾನಿಕ ಎಂದು ನಂಬುತ್ತಾರೆ ಮತ್ತು ಈ ರಾಜ್ಯಗಳಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೆ, ಧರ್ಮಾಧಾ–ರಿತ ಮೀಸಲಾತಿಯನ್ನು ರದ್ದುಪಡಿಸಿ, ಎಸ್ಸಿ, ಎಸ್ಟಿ, ಮತ್ತು ಒಬಿಸಿ ಅವರಿಗೆ ನ್ಯಾಯ ನೀಡಲಿದೆ. ಎಸ್ಸಿ, ಎಸ್ಟಿ ಮತ್ತು ಒಬಿಸಿ ಮೀಸಲಾತಿಗೆ ಬಿಜೆಪಿಯೇ ಅತಿ ದೊಡ್ಡ ಬೆಂಬಲಿಗವಾಗಿದೆ.

ಭಾರತೀಯ ರಾಜಕೀಯಕ್ಕೆ ಹೊಸ ದಿಶೆಯನ್ನು ನೀಡುವಲ್ಲಿ ಹೆಸರುವಾಸಿಯಾದ ಶಾ, "SC, ST ಮತ್ತು OBC ಮೀಸಲಾತಿಯಲ್ಲಿ ಯಾವುದೇ ರಾಜಕೀಯ ಪಕ್ಷವು ಜನರಿಗೆ



ಮೋಸ ಮಾಡಿದ್ದರೆ ಅದು ಕಾಂಗ್ರೆಸ್ ಮಾತ್ರ" ಎಂದು ಹೇಳಿದರು.

ಇತ್ತೀಚೆಗೆ, ಕಾಂಗ್ರೆಸ್ ನಕಲಿ ವೀಡಿಯೊಗಳ ಮೂಲಕ ಸಾರ್ವಜನಿಕರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಿದೆ, ಭಾರತೀಯ ಜನತಾ ಪಕ್ಷವು 400 ಕ್ಕಿಂತ ಹೆಚ್ಚು ಸ್ಥಾನಗಳನ್ನು ಪಡೆದರೆ, ಮೋದಿ ಸರ್ಕಾರವು ಸಂವಿಧಾನವನ್ನು ತಿದ್ದುಪಡಿ ಮಾಡುವ ಮೂಲಕ ಮೀಸಲಾತಿಯನ್ನು ರದ್ದುಗೊಳಿಸುತ್ತದೆ ಎಂದು ಆರೋಪಿಸುತ್ತಿದೆ.

ಆದಾಗ್ಯೂ, ಮೋದಿ ಸರ್ಕಾರದ ಕಳೆದ 10 ವರ್ಷಗಳ ಆಡಳಿತದ ಆಧಾರದ ಮೇಲೆ ಈ ಆರೋಪವು ಆಧಾರರಹಿತ ಮತ್ತು ಅವಾಸ್ತವ ಎಂದು ಗೊತ್ತಾಗುತ್ತದೆ.

2014 ಮತ್ತು 2019ರಲ್ಲಿ ಭಾರತೀಯ ಜನತಾ ಪಕ್ಷಕ್ಕೆ ದೇಶದ ಜನತೆ ಪೂರ್ಣ ಬಹುಮತ ನೀಡಿದ್ದು, ಬಿಜೆಪಿ 10 ವರ್ಷಗಳಿಂದ ಪೂರ್ಣ ಬಹುಮತದ ಸರ್ಕಾರ ನಡೆಸುತ್ತಿದೆ, ಆದ–'ರೆ ಒಂದು ಬಾರಿಯೂ ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡು, ಕಾಂಗ್ರೆಸ್ನಂತೆ ತುರ್ತು ಪರಿಸ್ಥಿತಿ ಘೋಷಿಸಿಲ್ಲ ಅಥವಾ ಅವಧಿಯನ್ನು ವಿಸ್ತರಿಸಿಲ್ಲ.

ಅದರ ಬದಲಿಗೆ ಮೋದಿ ನೇತೃತ್ವದ ಮತ್ತು ಅಮಿತ್ ಶಾ ಅವರ ಕೌಶಲ್ಯಪೂರ್ಣ ಮಾರ್ಗದರ್ಶನದ ಈ ಸರ್ಕಾರ ಪೂರ್ಣ ಬಹುಮತವನ್ನು 370 ನೇ ವಿಧಿಯನ್ನು ತೆಗೆದುಹಾಕಲು, ತ್ರಿವಳಿ ತಲಾಖ್ ರದ್ದುಗೊಳಿಸಲು, ಬ್ರಿಟಿಷರು ಮಾಡಿದ ಕಾನೂನುಗಳನ್ನು ಬದಲಾಯಿಸಲು, ಕರೋನಾ ಸಾಂಕ್ರಾಮಿಕ ಸಮಯದಲ್ಲಿ ಲಾಕ್ಡೌನ್ ಹೇರಲು, ಸಿಎಎ ತರಲು ಮತ್ತು ಭಗವಾನ್ ಶ್ರೀರಾಮನ ಮಂದಿರ ನಿರ್ಮಾಣದ ಮಾರ್ಗವನ್ನು ಸುಗಮಗೊಳಿಸಲು ಬಳಸಿಕೊಂಡಿದೆ.

ಹಸಿ ಬಿಸಿ ಸುಳ್ಳುಗಳನ್ನು ಹಬ್ಬಿಸಿ, ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸಲು ಕಾಂಗ್ರೆಸ್ ಪಕ್ಷ ಮುಂದಾಗಿದೆ ಎಂಬುದು ದೇಶದ ಜನತೆಗೆ ಗೊತ್ತಿದೆ.

ಸ್ವಾತಂತ್ರ್ಯಾನಂತರ ದೇಶದ ಜನತೆ ದಶಕಗಳ ಕಾಲ ಕಾಂಗ್ರೆಸ್ ಆಡಳಿತವನ್ನು ಕಂಡಿದ್ದು, ಈ ಅವಧಿಯಲ್ಲಿ ಬಡವರು ಇನ್ನಷ್ಟು ಬಡವರಾದರು. ಕಳೆದ 10 ವರ್ಷಗಳಲ್ಲಿ 25 ಕೋಟಿ ಜನರು ಬಡತನ ರೇಖೆಯಿಂದ ಹೊರಬಂದು, ಭಾರತವು ವಿಶ್ವಾದ್ಯಂತ ಹೊಸ ಗುರುತನ್ನು ಪಡೆಯುತ್ತಿರುವಾಗ, ಮೋದಿ ಸರ್ಕಾರದ ಸಾಧನೆಗಳನ್ನು ಜನರು ಸಹ ಗುರುತಿಸಿದ್ದಾರೆ.

ಹೋಲಿಸಿ ನೋಡಿದಾಗ, ಮೋದಿ ಸರ್ಕಾರದ 10 ವರ್ಷಗಳು, ಕಾಂಗ್ರೆಸ್ನ 55 ವರ್ಷಗಳ ಆಡಳಿತಕ್ಕಿಂತ ಉತ್ತಮವಾಗಿವೆ. 2024ರ ಲೋಕಸಭೆ ಚುನಾವಣೆಯಲ್ಲಿ ಜನರು ಯಾವ ಕಡೆ ಒಲವು ಹೊಂದಿದ್ದಾರೆ ಎಂದು ಊಹಿಸುವುದು ಸುಲಭ.

ಭಾರತೀಯ ರಾಜಕೀಯ ಚಾಣಕ್ಯ ಅಮಿತ್ ಶಾ 2024ರ ಲೋಕಸಭೆ ಚುನಾವಣೆಯಲ್ಲಿ ಕೇಸರಿ ಬಾವುಟ ಹಾರಿಸಲು ಸಂಪೂರ್ಣ ಸಿದ್ಧರಾಗಿದ್ದಾರೆ. ಶಾ ಒಂದು ಕ್ಷೇತ್ರಕ್ಕೆ ಎಂಟ್ರಿ ಕೊಟ್ಟರೆ ಗೆಲುವು ಶತಸಿದ್ಧ. ಅವರ ಚಾಣಾಕ್ಷ ತಂತ್ರಗಳಿಗೆ ಉತ್ತರವಿಲ್ಲ ಎಂದು ಪ್ರತಿಪಕ್ಷಗಳೂ ಒಪ್ಪಿಕೊಂಡಿವೆ. 2024ರಲ್ಲಿ 400ಕ್ಕೂ ಹೆಚ್ಚು ಸೀಟು ಪಡೆದು ಮೂರನೇ ಬಾರಿಗೆ ಮೋದಿಯವರು ಪ್ರಧಾನಿಯಾಗುವುದು ಖಚಿತ. ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಮೋದಿಯ ಮ್ಯಾಜಿಕ್ ಜೊತೆಗೆ ಶಾ ಫ್ಯಾಕ್ಟರ್ ಕೂಡ ನಿರ್ಣಾಯಕ ಪಾತ್ರ ವಹಿಸಲಿದೆ.

# ಸುಳ್ಳು ಮತ್ತು ಅಪಪ್ರಚಾರ ಕಾಂಗ್ರೆಸ್ ನ ಒಂದೆ ನಾಣ್ಯದ ಎರಡು ಮುಖಗಳು: ಸಿಟಿ ರವಿ

ಬೆಳಗಾವಿ: ಕಾಂಗ್ರೆಸ್ ನವರಿಗೆ ಜಾಣಕುರುಡು ಜಾಣ ಕಿವುಡುಯಿದೆ. ಒಳ್ಳೆಯ ಸಂಗತಿ ಯಾವುದೂ ಕಾಂಗ್ರೆಸ್ ಕಣ್ಣಿಗೆ ಬೀಳಲ್ಲ. ಸುಳ್ಳು ಮತ್ತು ಅಪಪ್ರಚಾರ ಕಾಂಗ್ರೆಸ್ ನ ಒಂದೆ ನಾಣ್ಯದ ಎರಡು ಮುಖಗಳು. ಸುಳ್ಳಿನಿಂದಲೇ ಕಾಂಗ್ರೆಸ್ ಬದುಕಿದೆ.

ಕಾಂಗ್ರೆಸ್ಗೆ ಸುಳ್ಳೇ ಆಕ್ಸಿಜನ್ ಇದ್ದಂಗೆ. ಸುಳ್ಳು ಇಲ್ಲದಿದ್ದರೆ ಕಾಂಗ್ರೆಸ್ ಸತ್ತು ಹೋಗುತ್ತದೆ. ಸುಳ್ಳನ್ನೇ ಉಸಿರಾಗಿಸಿಕೊಂಡು ಅವರು ಬದುಕಿದ್ದಾರೆ ಎಂದು ಮಾಜಿ ಸಚಿವ ಸಿ.ಟಿ.ರವಿ ಹೇಳಿದ್ದಾರೆ.

ನಗರದ ಬಿಜೆಪಿ ಮಾಧ್ಯಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಮಾಜಿ ಸಚಿವ ಸಿ.ಟಿ.ರವಿ ಪ್ರಜ್ವಲ್ ರೇವಣ್ಣ ಪ್ರಕರಣ ಚುನಾವಣೆಗೆ ಪರೋಕ್ಷವಾಗಿ ಸಣ್ಣ ಪ್ರಮಾಣದ ಪ್ರಭಾವ ಬೀರುತ್ತದೆ. ಆದರೆ ಕಾಂಗ್ರೆಸ್ ಇದನ್ನು ಇಡಿ ಎನ್ ಡಿಎ ಅಪರಾಧ ಎಂಬ ಥರ ಬಿಂಬಿಸುವ ಪ್ರಯತ್ನ ಮಾಡುತ್ತಿದೆ.

ಪ್ರಜ್ವಲ್ ರೇವಣ್ಣ ಪ್ರಕರಣದ ಬಗ್ಗೆ ಅವರು, ಪ್ರಾಥಮಿಕ ತನಿಖೆ ನಂತರ ಸತ್ಯಾಸತ್ಯತೆ ಹೊರ ಬರುತ್ತದೆ. ಸರ್ಕಾರವೇ ಎಸ್ ಐ ಟಿ ರಚನೆ ಮಾಡಿದೆ, ತನಿಖೆಯಾಗಲಿ. ಮಹಿಳಾ ನ್ಯಾಯಾಧೀಶ ತಂಡದಿಂದ ತನಿಖೆಯಾದರೆ ಆದಷ್ಟು ಬೇಗನೆ ಸತ್ಯಾಸತ್ಯತೆ ಹೊರ ಬರುತ್ತದೆ. ಇದಕ್ಕೆ ಸಂಬಂಧಪಟ್ಟಂತೆ ಹೆಚ್ ಡಿಕೆ ಹೇಳಿಕೆಯನ್ನು ಒಪ್ಪುತ್ತೇವೆ , ಈ ನೆಲದ ಕಾನೂನು ಒಬ್ಬರಿಗೊಂದು ಇನ್ನೊಬ್ಬರಿಗೊಂದು ಇಲ್ಲ. ಎಲ್ಲರಿಗೂ ಒಂದೇ ರೀತಿ ಅಪ್ಲೈ ಆಗುತ್ತೆ. ತನಿಖೆಗೂ ಮುಂಚೆ ನಾವು ಯಾರನ್ನೂ ಅಪರಾಧಿ ಎಂದು ಘೋಷಣೆ ಮಾಡುವಂತಿಲ್ಲ. ತನಿಖೆ ನಂತರ ಸತ್ಯ ಏನು ಅನ್ನೋದು ಹೊರಬರುತ್ತೆ. ದೂರುದಾರರ ದೂರಿನಲ್ಲಿನ ಹೇಳಿಕೆ ಪ್ರಕಾರ, ಇದು ನಾಲ್ಕೈದು ವರ್ಷದ ಹಿಂದಿನ ಘಟನೆ. ನಾಲ್ಕೈದು ವರ್ಷದ ಹಿಂದೆ ಜನತಾದಳ ಕಾಂಗ್ರೆಸ್ ಜೊತೆ ಇತ್ತು ಅನ್ನೋದು ಇವರು ಮರೆತಿದ್ದಾರೆ. ತನಿಖೆ ಆಗಲಿ, ಸತ್ಯ ಏನೆಂಬುದು ಹೊರಬರಲಿ ಎಂದು ಹೇಳಿದರು.



ಸಚಿವ ಶಿವರಾಜ್ ತಂಗಡಿಗಿಗೆ ಪ್ರಜಾಪ್ರಭುತ್ವದ ಅರ್ಥ ಗೊತ್ತಿಲ್ಲ. ಮೋದಿ ಮೋದಿ ಅಂದೋರಿಗೆ ಕಪಾಳಕ್ಕೆ ಹೊಡೀರಿ ಅಂತಾರೆ. ತಂಗಡಿಗಿಗೆ ಒಂದೊಂದು ಸಲ ತಾನು ಕಿಮ್ ಜಾಂಗ್ ಅನ್ನಿಸಿಬಿಡುತ್ತೆ. ಪ್ರಜಾಪ್ರಭುತ್ವದಲ್ಲಿ ಮತದಾರರೇ ಪ್ರಭುಗಳು. ಇದನ್ನು ತಂಗಡಗಿ ಮರೆತು ಬಿಟ್ಟಿದ್ದಾರೆ ಕಾಂಗ್ರೆಸ್ ಶಾಸಕ ರಾಜು ಕಾಗೆ ಪ್ರಧಾನಿ ಮೋದಿಯವರು ಸತ್ತರೆ ಬೇರೆ ಪ್ರಧಾನಿ ಇಲ್ಲವಂತೆ ಹೇಳುತ್ತಾರೆ ಮತ್ತು ಕರೆಂಟ್ ಕಟ್ ಅಂಥಹಾ ಮಾಡುತ್ತೇವೆ ಹೆದರಿಸುತ್ತಾರೆ.

ಡಿಸಿಎಂ ಡಿಕೆಶಿಯವರು ಬೆಂಗಳೂರಿನ ಅರ್ಪಾಟ್ ಮೆಂಟ್ ನ ಜನರಿಗೆ ನೀರಿನ ವ್ಯವಸ್ಥೆ , ಚರಂಡಿ ವ್ಯವಸ್ಥೆ ಸ್ಥಗಿತ ಗೊಳಿಸುತ್ತೇವೆ ಎಂದು ಹೆದರಿಸುತ್ತಾರೆ ಬೆಳಗಾವಿಯ ಪ್ರಭಾವಿ ಸಚಿವರು ತಮ್ಮ ಪಕ್ಷದ ವ್ಯಯಕ್ತಿಕ ಪ್ರಚಾರ ಅಂಗನವಾಡಿ ಕಾರ್ಯಕರ್ತರಿಗೆ ಬೆದರಿಕೆ ಹಾಕಿ ಅಧಿಕಾರ ದರ್ಪದಿಂದ ಪ್ರಚಾರಕ್ಕೆ ಬಳಸಿ ಕೊಳ್ಳುತ್ತೀದ್ದಾರೆ ಎಂದು ವಾಗ್ದಾಳಿ ನಡೆಸಿದ್ದರು.

ಶಾಸಕ ಲಕ್ಷ್ಮಣ ಸವದಿ ನನ್ನ ಸ್ನೇಹಿತ ಅವನ ಜೊತೆಗೆ ಒಡನಾಟ ಜಾಸ್ತಿವಿದೆ ಬಿಜೆಪಿ ಪಕ್ಷ ಅವರನ್ನು ಸೋತರು ಕೂಡಾ ಡಿಸಿಎಂ ಮಾಡಿತ್ತು , ಅವರಲ್ಲಿ ರಾಷ್ಟ್ರ ಪ್ರೇಮ ವಿದೆ ಅದನ್ನು ಒಪ್ಪುತ್ತೇನೆ , ರಾಷ್ಟ್ರ ಪ್ರೇಮವನ್ನು ಕಾಂಗ್ರೆಸ್ ಪಕ್ಷಕ್ಕೆ ಹೇಳಿ ಕೊಡಲ್ಲಿ , ಭಾರತ ಮಾತಕೀ ಜೈ ಅನ್ನಲು ಖರ್ಗೆ ಅನುಮತಿ ಕೇಳುವುದು ಸೂಕ್ತವಲ್ಲ ಕಾಂಗ್ರೆಸ ನವರು ಅವನ ಮುಖಕ್ಕೆ ಮೊನಕೈಗೆ ತುಪ್ಪ ಸವರಿದ್ರು , ಲಕ್ಷ್ಮಣ ಸವದಿಯವರ ಒಂದು ವರ್ಷದ ಹಿಂದಿನ ಭಾಷಣ ಹಾಕಿದ್ರೆ , ಸವದಿಯವರಿಗೆ ಮುಜುಗರ ಆಗುತ್ತದೆ , ನಾನು ಅವರು ಬಿಜೆಪಿ ಯಲ್ಲಿ ಇದ್ದಾಗ, ಅವರ ಮನೆಯಲ್ಲಿ ಇದ್ದು ಊಟ ಮಾಡಿದ್ದೇನೆ , ನನ್ನ ಸ್ನೇಹಿತನಿಗೆ ಹಾಗೇ ಮುಜುಗರ ಆಗದಂತೆ ಎಚ್ಚರಿಕೆ ವಹಿಸಲಿ. ಮುಂದಿನ ದಿನಗಳಲ್ಲಿ ಒಳ್ಳೆಯ ನಿರ್ಧಾರ ತೆಗದುಕೊಳ್ಳಲ್ಲಿ ಎಂದು ಹೇಳಿದ್ದರು

ಸುದ್ದಿಗೋಷ್ಠಿಯಲ್ಲಿ ರಾಜ್ಯ ಬಿಜೆಪಿ ವಕ್ತಾರ ಎಂ.ಬಿ ಜೀರಲಿ, ಬಿಜೆಪಿ ಜಿಲ್ಲಾದ್ಯಕ್ಷ ಸುಭಾಷ್ ಪಾಟೀಲ್, ಎಫ್ ಎಸ್ ಸಿದ್ದನಗೌಡ, ಹನಮಂತ ಕೊಂಗಾಲಿ ಸೇರಿ ಹಲವರು ಇದ್ದರು.

# ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರಿಂದ ಪರಿಶೀಲನೆ

ಬಳ್ಳಾರಿ: ಸೇರಿದಂತೆ ಚುನಾವಣೆ ಕಾರ್ಯಕ್ಕೆ ನೇಮಕಗೊಂಡ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಸೂಕ್ತ ತರಬೇತಿ ಪಡೆದು, ಯಾವುದೇ ಗೊಂದಲಕ್ಕೀಡಾಗದೆ ವ್ಯವಸ್ಥಿತವಾಗಿ ಮತದಾನ ಪ್ರಕ್ರಿಯೆ ನಡೆಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ ನೀಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮೇ. 07 ರಂದು ಮತದಾನ ನಡೆಯಲಿದ್ದು, ಇದಕ್ಕಾಗಿ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳಿಗೆ ವಿಧಾನಸಭಾ ಕ್ಷೇತ್ರವಾರು ನಗರದ ವಿವಿಧೆಡೆ ಎರಡನೆ ಹಂತದ ತರಬೇತಿಯನ್ನು ಬುಧವಾರ ಏರ್ಪಡಿಸಲಾಗಿದ್ದು, ತರಬೇತಿ ಸ್ಥಳಕ್ಕೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಿ, ಬಳಿಕ ಮಾತನಾಡಿದರು.

ಮೇ. 07 ರಂದು ಮತದಾನ ನಡೆಯಲಿದ್ದು, ಮತದಾನ ಪ್ರಕ್ರಿಯೆಯನ್ನು ಸುಗಮವಾಗಿ ಹಾಗೂ ಅಚ್ಚುಕಟ್ಟಾಗಿ ನಡೆಸುವಲ್ಲಿ ಮತಗಟ್ಟೆ ಕರ್ತವ್ಯಕ್ಕೆ ನಿಯೋಜಿತರಾದ ಅಧಿಕಾರಿ, ಸಿಬ್ಬಂದಿಗಳ ಪಾತ್ರ ಮಹತ್ವದ್ದಾಗಿದೆ.





ಹೀಗಾಗಿ ಯಾವುದೇ ಗೊಂದಲಗಳಿಗೆ ಅವಕಾಶ ಮಾಡಿಕೊಡದೆ, ವ್ಯವಸ್ಥಿತವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಉಪವಿಭಾಗಾಧಿಕಾರಿ ಹೇಮಂತ್ ಕುಮಾರ್ ಅವರು ತರಬೇತಿಗಾಗಿ ಆಗಮಿಸಿದ್ದ ಅಧಿಕಾರಿ, ಸಿಬ್ಬಂದಿಗಳಿಗೆ ಪ್ರೋತ್ಸಾಹ ಮಾತುಗಳ ಮೂಲಕ ಹುರಿದುಂಬಿಸುವ ಕಾರ್ಯ ಮಾಡಿದರು. ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಚುನಾವಣೆ ನಡೆಸಲು ಎಲ್ಲ ಅಧಿಕಾರಿ, ಸಿಬ್ಬಂದಿಗಳು ಬದ್ಧರಾಗಿರಬೇಕು. ಮೇ. 06 ರಂದೇ ಮಸ್ಟರಿಂಗ್ ಕಾರ್ಯ ನಡೆಯಲಿದ್ದು, ಇದಕ್ಕೆ ಆಗಮಿಸುವ ಅಧಿಕಾರಿ, ಸಿಬ್ಬಂದಿಗಳಿಗೆ ಸಾರಿಗೆ, ಊಟೋಪಹಾರ ಸೇರಿದಂತೆ ಸಕಲ ವ್ಯವಸ್ಥೆ ಮಾಡಿಕೊಡಲಾಗುವುದು. ಮತದಾನ ಪ್ರಕ್ರಿಯೆ ಪ್ರಾರಂಭಕ್ಕೂ ಮುನ್ನ ನಿರ್ವಹಿಸಬೇಕಾದ ಕಾರ್ಯಗಳು, ಮತದಾನದ ದಿನ ಅಣಕು ಮತದಾನ, ನಂತರ ಮತದಾನ ಪ್ರಕ್ರಿಯೆ ನಡೆಸುವ ರೀತಿ ಹಾಗೂ ಮತದಾನವನ್ನು ಪೂರ್ಣಗೊಳಿಸಿ, ಡಿಮಸ್ಟರಿಂಗ್ ನಲ್ಲಿ ಇವಿಎಂ ಸಹಿತ ಇತರೆ ದಾಖಲೆಗಳನ್ನು ಹಸ್ತಾಂತರಿಸುವ ಬಗ್ಗೆ ಕೂಲಂಕುಷವಾಗಿ ತರಬೇತಿ ಹಾಗೂ ಮಾಹಿತಿ ನೀಡಲಾಗುವುದು.


ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿಗಳು, ಎಲ್ಲಾ ಹಂತದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ತಹಸಿಲ್ದಾರ್ ಗುರುರಾಜ್, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಬಸಪ್ಪ ಸೇರಿದಂತೆ ಮತ್ತಿತರು ಇದ್ದರು.

ಕಂಪ್ಲಿ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳಿಗೆ ಬಳ್ಳಾರಿ ನಗರದ ಸೇಂಟ್ ಫಿಲೋಮಿನಾ ಸಂಯುಕ್ತ ಜೂನಿಯರ್ ಕಾಲೇಜಿನಲ್ಲಿ ತರಬೇತಿ ಏರ್ಪಡಿಸಲಾಯಿತು.

ಅದೇ ರೀತಿ ಬಳ್ಳಾರಿ ಗ್ರಾಮೀಣ ಕ್ಷೇತ್ರದ ಅಧಿಕಾರಿ, ಸಿಬ್ಬಂದಿಗೆ ಎಸ್.ಕೆ. ಮೋದಿ ಸ್ಕೂಲ್‌ನಲ್ಲಿ. ಬಳ್ಳಾರಿ ನಗರ ಕ್ಷೇತ್ರದ ಅಧಿಕಾರಿ, ಸಿಬ್ಬಂದಿಗೆ ಸೇಂಟ್ ಜಾನ್ಸ್ ಪಿ.ಯು. ಕಾಲೇಜಿನಲ್ಲಿ ತರಬೇತಿ ಕಾರ್ಯಕ್ರಮ ಏರ್ಪಡಿಸಲಾಯಿತು.

# ಚುನಾವಣಾ ಜಾಹೀರಾತುಗಳಿಗೆ ಪೂರ್ವಾನುಮತಿ ಕಡ್ಡಾಯ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ



ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮೇ 7 ರಂದು ಮತದಾನ ನಡೆಯಲಿದೆ. ಈ ಹಿನ್ನಲೆಯಲ್ಲಿ ಮೇ 6 ಮತ್ತು 7 ರಂದು ಅಭ್ಯರ್ಥಿಗಳು ಮತ್ತು ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಜಾಹೀರಾತು ಪ್ರಕಟಿಸಬೇಕಾದರೆ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ (ಎಂಸಿಎಂಸಿ) ವತಿಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಆವರಣದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲುಸ್ತುವಾರಿ ಸಮಿತಿಯಿಂದ (ಎಂಸಿಎಂಸಿ) ವಿವಿಧ ಮಾಧ್ಯಮಗಳಲ್ಲಿ ದಿನನಿತ್ಯ ಪ್ರಸಾರವಾಗುವ ರಾಜಕೀಯ ಜಾಹೀರಾತುಗಳ ಬಗ್ಗೆ ನಿಗಾ ವಹಿಸಲಾಗುತ್ತಿದೆ.

ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಎಂಸಿಎಂಸಿ ಸಮಿತಿಯ ಅನುಮತಿಯಿಲ್ಲದೆ ಚುನಾವಣಾ ರಾಜಕೀಯ ಜಾಹೀರಾತು ಪ್ರಕಟಿಸುವಂತಿಲ್ಲ, ಎಂಸಿಎಂಸಿ ಸಮಿತಿಯ ಪೂರ್ವಾನುಮತಿ ಪಡೆದು ರಾಜಕೀಯ ಜಾಹೀರಾತು ಪ್ರಕಟಿಸಬೇಕು.

ವಿದ್ಯುನ್ಮಾನ ಮಾಧ್ಯಮ(ಎಲೆಕ್ಟ್ರಾನಿಕ್)ಗಳಾದ ಟಿ.ವಿ, ರೇಡಿಯೋ, ಮೊಬೈಲ್ ಸಂದೇಶ, ಧ್ವನಿ ಮುದ್ರಿತ ಸಂದೇಶಗಳು, ಬಲ್ಕ್ ಎಸ್‌ಎಂಎಸ್ ಹಾಗೂ ಸಾಮಾಜಿಕ ಜಾಲತಾಣಗಳಾದ ಫೇಸ್ಬುಕ್, ಎಕ್ಸ್, ಇನ್ಸ್ಟಾಗ್ರಾಂಗಳಲ್ಲಿ ಜಾಹೀರಾತು ಮೂಲಕ ಪ್ರಚಾರ ಕೈಗೊಳ್ಳುವವರು ಎಂಸಿಎಂಸಿ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ.

ಮುದ್ರಣ ಮಾಧ್ಯಮಕ್ಕೆ ಸಂಬಂಧಿಸಿದಂತೆ ಮತದಾನದ ಪೂರ್ವ ದಿನವಾದ ಮೇ 06 ಮತ್ತು ಮತದಾನ ದಿನವಾದ ಮೇ 07 ರಂದು ಚುನಾವಣಾ ರಾಜಕೀಯ ಜಾಹೀರಾತು ಪ್ರಕಟಿಸಲು ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ.

ಅಭ್ಯರ್ಥಿಗಳು ಅಥವಾ ವ್ಯಕ್ತಿಗಳು ಚುನಾವಣಾ ರಾಜಕೀಯ ಜಾಹೀರಾತು ಪ್ರಸಾರ ಹಾಗೂ ಪ್ರಕಟಣೆಗೆ ನಿಗದಿತ ನಮೂನೆಯಲ್ಲಿ ಎಂಸಿಎಂಸಿ ಸಮಿತಿಗೆ ಅರ್ಜಿ ಸಲ್ಲಿಸಿ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 06 ಮತ್ತು 07 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಮೇ 04 ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.

*ಪೂರ್ವಾನುಮತಿಗೆ ಅರ್ಜಿ ಲಭ್ಯ:*

ಮೇ 06 ಮತ್ತು 07 ರಂದು ಮುದ್ರಣ ಮಾಧ್ಯಮದಲ್ಲಿ ಜಾಹೀರಾತು ಪ್ರಕಟಿಸುವ ಸಲುವಾಗಿ ಅನುಮತಿ ಪಡೆಯಲು ಅಗತ್ಯವಿರುವ ನಿಗದಿತ ನಮೂನೆಯ ಅರ್ಜಿ ನಮೂನೆಗಳು ಜಿಲ್ಲಾಧಿಕಾರಿಗಳ ಕಚೇರಿ ಆವರಣದ ವಾರ್ತಾ ಮತ್ತು ಸಾರ್ವಜನಿಕ ಇಲಾಖೆ ಕಚೇರಿಯಿಂದ ಪಡೆಯಬಹುದು.

ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾ ಮಟ್ಟದ ಎಂಸಿಎಂಸಿ ವತಿಯಿಂದ ನಿಗದಿತ ನಮೂನೆಯಲ್ಲಿ ಪೂರ್ವಾನುಮತಿ ಪಡೆಯದ ಜಾಹೀರಾತುಗಳನ್ನು ಸ್ಥಳೀಯ, ಪ್ರಾದೇಶಿಕ, ರಾಜ್ಯ ಹಾಗೂ ರಾಷ್ಟ್ರ ಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ದೇಶದಲ್ಲಿ ಡ್ಯಾಮ್ ಗಳನ್ನು ಕಟ್ಟಿದ್ದು, ಹೆಚ್ಚು ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಿದ್ದು ಕಾಂಗ್ರೆಸ್ ಪಕ್ಷವೇ: ಸಚಿವ ಸತೀಶ್ ಜಾರಕಿಹೊಳಿ

ಅಥಣಿ: ಬ್ರಿಟಿಷರು ಭಾರತ ಬಿಟ್ಟು ಹೋದ ಬಳಿಕ ಕಾಂಗ್ರೆಸ್ ಪಕ್ಷದ ಸರ್ವ ಪ್ರಧಾನಿಗಳು ದೇಶದಲ್ಲಿ ಡ್ಯಾಮ್ ಗಳನ್ನು ನಿರ್ಮಿಸಿದರು. ನೀರಾವರಿ ಯೋಜನೆಗಳಿಗೂ ಆದ್ಯತೆ ನೀಡಿದರು. ಆದರೆ ಬಿಜೆಪಿಯವರು ಒಂದೇ ಒಂದು ಡ್ಯಾಮ್‌ನ್ನು ದೇಶದಲ್ಲಿ ನಿರ್ಮಿಸಿಲ್ಲ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.



ಅಥಣಿ ತಾಲೂಕಿನ ತೆಲಸಂಗದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಚಿಕ್ಕೋಡಿ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಮತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ಏಕೆ ಆಶೀರ್ವಾದ ಮಾಡಬೇಕೆಂದರೆ, ಕಾಂಗ್ರೆಸ್ ಪಕ್ಷದ ಪ್ರಧಾನಿಗಳು, ರಾಜದಲ್ಲಿ ಇದುವರೆಗೆ ಅಧಿಕಾರ ನಡೆಸಿದ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿಗಳು ರಾಜ್ಯದ ಜನಕ್ಕೆ ಜನಪರ ಯೋಜನೆಗಳನ್ನು ನೀಡುವ ಮೂಲಕ ಅಪಾರ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಸಿಎಂ ಸಿದ್ದರಾಮಯ್ಯರ ಅವಧಿಯಲ್ಲಿ ಕೃಷಿ ಹೊಂಡಗಳ ನಿರ್ಮಾಣ ಮಾಡುವ ಯೋಜನೆ ಜಾರಿಗೆ ತಂದರು. ಇನ್ನು ಅಥಣಿ ತಾಲೂಕಿನಲ್ಲಿ ಆದ ಎಲ್ಲಾ ನೀರಾವರಿ ಯೋಜನೆಗಳನ್ನು ಕಾಂಗ್ರೆಸ್ ಪಕ್ಷವೇ ಮಾಡಿದೆ. ಕೇಂದ್ರದಲ್ಲಿಯೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಬಡವರ ಸಾಲ, ಮಹಿಳೆಯರಿಗೆ ವರ್ಷಕ್ಕೆ ಒಂದು ಲಕ್ಷ. ಇನ್ನು 25 ಲಕ್ಷ ಆರೋಗ್ಯ ವಿಮೆ ಸೇರಿದಂತೆ ಅನೇಕ ಯೋಜನೆಗಳನ್ನು ಈಗಾಗಲೇ ಪ್ರಣಾಳಿಕೆಯಲ್ಲಿ ಘೋಷಿಸಲಾಗಿದೆ. ಆದ್ದರಿಂದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಆಶೀರ್ವದಿಸಬೇಕೆಂದು ಕೋರಿದರು.

ಪ್ರಿಯಂಕಾ ಜಾರಕಿಹೊಳಿ ಅವರಿಗೆ ಸಂಸದರಾಗಿ ಕೆಲಸ ಮಾಡುವ ಸಾಮರ್ಥ್ಯ ಇದೆ. ಶಾಸಕರಾದ ಲಕ್ಷ್ಮಣ ಸವದಿ, ರಾಜು ಕಾಗೆ, ಗಣೇಶ್ ಹುಕ್ಕೇರಿ, ಮಹೇಂದ್ರ ತಮ್ಮನ್ನವರ್ ಅವರು ಸೇರಿದಂತೆ ನಮ್ಮ ಜತೆ ಕೆಲಸ ಮಾಡುತ್ತಾರೆ. ಆದ್ದರಿಂದ ಕೆಲಸ ಮಾಡುವನುವರನ್ನು ಗುರುತಿಸುವ ಕೆಲಸವನ್ನು ನೀವು ಮಾಡಬೇಕು. ಅಂದಾಗ ಸರ್ವರು ಪ್ರಗತಿ ಹೊಂದಲು ಸಾಧ್ಯವಿದೆ. ಸರ್ವರೂ ಸಮಾನತೆಯಿಂದ ಬಾಳಬೇಕಾದರೆ ಕಾಂಗ್ರೆಸ್ ಪಕ್ಷವನ್ನೇ ಅಧಿಕಾರಕ್ಕೆ ತರ ತರಬೇಕೆಂದರು.

ಶಾಸಕ ವಿಶ್ವಾಸ ವೈದ್ಯ ಮಾತನಾಡಿ, ಸಚಿವ ಸತೀಶ್ ಅಣ್ಣಾ ಜಾರಕಿಹೊಳಿ ಅವರು ನಂಬಿದವರನ್ನು ಯಾವತ್ತೂ ಕೈ ಬೀಡಲ್ಲ. ಇದಕ್ಕೆ ನಾನೇ ಸಾಕ್ಷಿ. ನಾನು ಇಂದು ಶಾಸಕನಾಗಿದ್ದೇನೆಂದರೆ ಅದಕ್ಕೆ ಸತೀಶ್ ಅಣ್ಣಾ ಜಾರಕಿಹೊಳಿ ಅವರೇ ಕಾರಣ. ಅದಕ್ಕಾಗಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಹೆಚ್ಚಿನ ಮತಗಳನ್ನು ನೀಡಿ ಎಂದು ತಮ್ಮಲ್ಲಿ ಕೈ ಮುಗಿದು ಕೋರುತ್ತೇನೆ. ಏಕೆಂದರೆ ಕಳೆದ ಆರು ಏಳು ವರ್ಷಗಳಿಂದ ಪ್ರಿಯಂಕಾ ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ರಾಜಕೀಯವಾಗಿ ಸೇವೆ ಮಾಡಲು ಅವಕಾಶ ನೀಡಿ ಎಂದು ವಿನಂತಿಸಿದರು.

ಯುವ ನಾಯಕ ಚಿದಾನಂದ ಸವದಿ ಮಾತನಾಡಿ, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಆಯ್ಕೆಮಾಡುವ ಮೂಲಕ ಈ ಭಾಗದ ಅಭಿವೃದ್ಧಿ, ಸೇವೆ ಮಾಡಲು ಅನುವು ಮಾಡಿಕೊಡಿ. ಕೊವಿಡ್ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸತೀಶ್ ಅಣ್ಣಾ ಮಾಡಿದ ಕಾರ್ಯ ಯಾರು ಮರೆಯುವಂತಿಲ್ಲ. ಅವರ ಸೇವೆಯಿಂದ ಅಪಾರ ಸಂಖ್ಯೆಯ ಜೀವಗಳು ಉಳಿದೆವೆ ಎಂದ ಅವರು, ತೆಲಸಂಗ ಭಾಗದ ಮತ್ತು ನಮ್ಮದು ಇನ್ನೊಂದು ಮನವಿ ಇದೆ. ಸಚಿವ ಸತೀಶ್ ಅಣ್ಣಾ ಅವರು ತೆಲಸಂಗ ಲ್ಲಿ ಪ್ರವಾಸಿ ಮಂದಿರ ನಿರ್ಮಿಸಿ ಕೊಡಬೇಕೆಂದು ಇದೇ ವೇಳೆ ಮನವಿ ಮಾಡಿದರು.

ತೆಲಸಂಗ ಬ್ಲಾಕ್ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಅಮೋಘ ಸಿದ್ದ ಕೊಬರಿ ಪ್ರಾಸ್ತಾವಿಕವಾಗಿ ಮಾತನಾಡಿ, 10 ವರ್ಷಗಳ ಹಿಂದೆ ಸರ್ವರೂ ಕನಸು ಕಂಡು ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತಂದರು, ಆದ'ರೆ ನಿಮ್ಮ ಕನಸು ಈಡೇರಲಿಲ್ಲ. ನಮ್ಮ ಕನಸವೂ ಈಡೇರಲಿಲ್ಲ. ದೇಶದಲ್ಲಿ ಯಾವುದೇ ಜನಪರ ಯೋಜನೆಗಳನ್ನು ಜಾರಿಗೆ ತರಲಿಲ್ಲ. ಇದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ದುರಾಡಳಿತವೇ ಸಾಕ್ಷಿ ಎಂದರು.

ಇದೇ ವೇಳೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ತೆಲಸಂಗನ ಮುಖಂಡರು ವಚನ ಸಾಹಿತ್ಯ ಪುಸ್ತಕವನ್ನು ನೀಡಿ ಸತ್ಕರಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಸದಾಶಿವ ಬೂಟಾಳೆ, ಗಜಾನನ ಮಂಗಸೂಳಿ, ಚಿದಾನಂದ ಸವದಿ, ಶ್ಯಾಮ್ ಪೂಜಾರಿ, ಶಿವು ಗುಡ್ಡಾಪುರ, ಉದಯ ಶೆಟ್ಟಿ, ಬಸವರಾಜ ಬೂಟಾಳೆ, ಸಿದ್ದರಾಯ ಯಲಿಹಡಲಗಿ, ಗುರು ದಾಶ್ಯಾಳ, ಬಾಬು ಕಾಕಾ ಜಮಖಂಡಿ, ಭಾರತಿ ಲೊಕಂಡೆ ಸೇರಿದಂತೆ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೂಡಲಗಿಯಲ್ಲಿ ಬೃಹತ್ ರೋಡ್ ಶೋ ಮೂಲಕ ಜಗದೀಶ್ ಶೆಟ್ಟರ್ ಶಕ್ತಿ ಪ್ರದರ್ಶನ

ಬೆಳಗಾವಿ: ಲೋಕಸಭಾ ಚುನಾವಣೆ ನಿಮಿತ್ತ ಶಾಸಕ ಬಾಲಚಂದ್ರ ಜಾರಕಿಹೊಳಿ ನೆತೃತ್ವದಲ್ಲಿ ಬಿಜೆಪಿ ಜಗದೀಶ್ ಶೆಟ್ಟರ್ ಅವರು ಮೂಡಲಗಿ ಪಟ್ಟಣದಲ್ಲಿ ಬೃಹತ್ ರೋಡ್ ಶೋ ನಡೆಸುವ ಮೂಲಕ ಶಕ್ತಿ ಪ್ರದರ್ಶನ ಮಾಡಿದರು.

ಲೋಕಸಭಾ ಚುನಾವಣೆಯ ಅಂಗವಾಗಿ ಮೂಡಲಗಿ ಪಟ್ಟಣದಲ್ಲಿ ಬೃಹತ್ ರೋಡ್ ಶೋ ನಡೆಸುವ ಮೂಲಕ ಬಹಿರಂಗ ಸಭೆ ನಡೆಸಿ ಮತಯಾಚನೆ ಮಾಡಿದರು. ರೋಡ್ ಶೋ ವೇಳೆ ಡೊಳ್ಳು ಕುಣಿತ ಸೇರಿದಂತೆ ವಿವಿಧ ವಾದ್ಯಗಳ ಮೂಲಕ ಜಗದೀಶ್ ಶೆಟ್ಟರ್ ಅವರಿಗೆ ಭವ್ಯವಾಗಿ ಸ್ವಾಗತ ಕೊರಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಮಾಜಿ ಸಚಿವ ಮುರಗೇಶ್ ನಿರಾಣಿ ಅವರು, ನಾನು 12 ಜಿಲ್ಲೆಗಳ ಪ್ರವಾಸ ಮಾಡಿದ್ದೇನೆ. ಮೂಡಲಗಿಯಲ್ಲಿ ಜನ ತೊರುತ್ತಿರುವ ಹುಮ್ಮಸ್ಸು ಬೇರೆಲ್ಲೂ ನೋಡಿಲ್ಲ. ರಾಜಕಾರಣದಲ್ಲಿ ಯಾವ ರೀತಿ ಇರಬೇಕು ಎಂದು ಬಾಲಚಂದ್ರ ಜಾರಕಿಹೊಳಿ ತೋರಿಸಿಕೊಟ್ಟಿದ್ದಾರೆ.





ಸೂರ್ಯ–ಚಂದ್ರ ಹುಟ್ಟುವುದು ಎಷ್ಟು ಸತ್ಯವೂ ಮೋದಿಯವರು ಮತ್ತೆ ಪ್ರಧಾನಿ ಆಗಯವುದು ಅಷ್ಟೆ ಸತ್ಯ. ಹಾಗಾಗಿ ಈ ಹಿಂದೆ ದಿ. ಸುರೇಶ್ ಅಂಗಡಿಯವರಿಗೆ ನೀಡಿದ ಲೀಡ್ ಕಿಂತ ಹೆಚ್ಚಿನ ಲೀಡ್ ಜಗದೀಶ್ ಶೆಟ್ಟರ್ ಅವರಿಗೆ ನೀಡಬೇಕು ಎಂದು ಮುರಗೇಶ್ ನಿರಾಣಿ ಅವರು ಕರೆ ನೀಡಿದರು.

ಬಳಿಕ ಮಾತನಾಡಿದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಮೂಡಲಗಿ ಇತಿಹಾಸದಲ್ಲಿ ದಾಖಲೆ ಬರೆಯುವ ಸಮಾವೇಶ ಇದಾಗಿದೆ.

ಈ ದೇಶದ ಭವಿಷ್ಯ ನರೇಂದ್ರ ಮೋದಿ ಮೇಲೆ ನಿಂತಿದೆ. ಮೋದಿ ಅಂತಹ ನಾಯಕ ನಮಗೆ ಸಿಕ್ಕಿದ್ದು ನಮ್ಮ ಸೌಭಾಗ್ಯ. ನರೇಂದ್ರ ಮೋದಿ ನಮ್ಮ ನಾಯಕ ಮುಂದಿನ ಪ್ರಧಾನಿ ಆದರೆ, ಇಂಡಿಯಾ ಮೈತ್ರಿಕೂಟದ ನಾಯಕ ಯಾರು..? ರಾಹುಲ್ ಗಾಂಧಿನಾ, ಮಮತಾ ಬ್ಯಾನರ್ಜಿನಾ, ಮಲ್ಲಿಕಾರ್ಜುನ ಖರ್ಗೆನಾ, ಅಖಿಲೇಶ್ ಯಾದವನಾ ಅಥವಾ ಜೈಲಿನಲ್ಲಿ ಇರುವ ಕೇಜ್ರೀವಾಲ ಎಂದು ಪ್ರಶ್ನಿಸಿದರು.

ನಮಗೆ ನಿಜವಾದ ಗ್ಯಾರಂಟಿ ದೇಶದ ರಕ್ಷಣೆ, ದೇಶದ ಸುಭದ್ರತೆ, ದೇಶದ ಗೌರವ ಇದುವೇ ಮೋದಿಯವರ ಗ್ಯಾರಂಟಿ ಎಂದು ತಿಳಿಸಿದರು.

ಕೇಂದ್ರದ ಅನೇಕ ಯೋಜನೆಗಳು ಎಲ್ಲಾ ವರ್ಗದವರಿಗೆ ಸಿಗುತ್ತಿದೆ. ಬಿಜೆಪಿ ಸರ್ಕಾರ ಎಲ್ಲಾ ವರ್ಗದವರಿಗೆ ಎಲ್ಲಾ ಯೋಜನೆಗಳು ನೀಡಿದೆ. ಕಾಂಗ್ರೆಸ್ ಅಲ್ಪಸಂಖ್ಯಾತರ ತುಷ್ಠಿಕರ ಮಾಡುತ್ತಿದೆ. ವಿಧಾನ ಸಭೆಯಲ್ಲಿ ಪಾಕಿಸ್ತಾನ ಜಿಂದಾಬಾದ ಅಂದರು ಅದನ್ನು ಖಂಡಿಸುವ ಕೆಲಸ ಕಾಂಗ್ರೆಸ್ ಮಾಡಿಲ್ಲ. ನಾನು ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಆಯ್ಕೆಯಾದ ನಂತರ ಬೆಳಗಾವಿಯನ್ನು ಸಾಕಷ್ಟು ಅಭಿವೃದ್ಧಿ ಮಾಡುತ್ತೇನೆ. ಬೆಳಗಾವಿಯನ್ನು ಬೆಂಗಳೂರಿನ ಹಾಗೆ ರಾಜ್ಯದ ಎರಡನೇ ರಾಜಧಾನಿಯನ್ನಾಗಿ ಮಾಡುತ್ತೇನೆ ಎಂದು ಪ್ರಮಾಣ ಮಾಡಿದರು.

ಶಾಸಕ ಬಾಲಚಂದ್ರ ಜಾರಕಿಹೊಳಿ ಮಾತನಾಡಿ, ನಮ್ಮ ಕ್ಷೇತ್ರದಲ್ಲಿ ನಮಗೆ ಎಲ್ಲಾ ಜಾತಿ, ಎಲ್ಲಾ ಸಮಾಜ ಸಮಾನವಾಗಿದೆ. ನಮ್ಮ ಕ್ಷೇತ್ರದಲ್ಲಿ ಎಲ್ಲರೂ ಸರ್ವಜನಾಂಗದ ಶಾಂತಿಯ ತೋಟ ಎನ್ನುವ ರೀತಿಯಲ್ಲಿ ಬಾಳುತ್ತಿದ್ದೇವೆ. ಮೇ.7 ರಂದು ಏನೇ ಆದರು ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರಿಗೆ ಮತ ನೀಡಿ, ಅವರಿಗೆ ಗೆಲ್ಲಿಸಬೇಕು. ಮುಂದೆ ಏನೆ ಆದರೂ ನಾವು ನಿಮ್ಮ ಜೊತೆ ಇರುತ್ತೇವೆ.

ನನ್ನನ್ನು ನಿಮ್ಮ ಮನೆಮಗನ ರೀತಿಯಲ್ಲಿ ಆಶೀರ್ವಾದ ಮಾಡಿದ ಹಾಗೆ ಜಗದೀಶ್ ಶೆಟ್ಟರ್ ಅವರನ್ನು ಕೂಡಾ ಗೆಲ್ಲಿಸಬೇಕು. ಜಗದೀಶ್ ಶೆಟ್ಟರ್ ಅವರು ಗೆಲ್ಲಬೇಕು ಎಂಬ ಆಸೆ ನಮಗೆ ಇದೆ. ಹಾಗಾಗಿ ಮೇ 7 ರಂದು ಬಿಜೆಪಿಗೆ ವೋಟ್ ಹಾಕಬೇಕು ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಕರೆ ನೀಡಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ್, ಮಂಡಳ ಅಧ್ಯಕ್ಷ ಮಹಾದೇವಪ್ಪ ಶೇಕಿ, ಯುವ ನಾಯಕ ಸರ್ವೋತ್ತಮ ಜಾರಕಿಹೊಳಿ, ಇಂದಿರಾ ಅಂತರಗಟ್ಟಿ, ಸತೀಶ್ ಒಂಟಗೋಡಿ ಸೇರಿದಂತೆ ಸಾವಿರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

**ಮೂಡಲಗಿ–ಅರಭಾವಿ ವಿಧಾನಸಭಾ ಕ್ಷೇತ್ರದಲ್ಲಿ ಹೋದಲ್ಲೆಲ್ಲ ಜಗದೀಶ್ ಶೆಟ್ಟರ್ ಗೆ ಅಭೂತಪೂರ್ವ ಬೆಂಬಲ:**

ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಬುಧವಾರ ಮೂಡಲಗಿ–ಅರಭಾವಿ ವಿಧಾನಸಭಾ ವ್ಯಾಪ್ತಿಯ ಮೇಳವಂಕಿ, ಕೌಜಲಗಿ, ಕುಲಗೋಡ, ವಡೇರಹಟ್ಟಿ ಹಾಗೂ ಮುಡಲಗಿಯಲ್ಲಿ ಬೃಹತ್ ಸಮಾವೇಶ್ ನಡೆಸಿದರು.

ಈ ವೇಳೆ ಶಾಸಕ ಬಾಲಚಂದ್ರ, ಮಾಜಿ ಸಚಿವ ಮುರಗೇಶ ನಿರಾಣಿ, ಮಾಜಿ ವಿಧಾನ ಪರಿಷತ ಸದಸ್ಯ ಮಹಾಂತೇಶ ಕವಟಗಿಮಠ, ಸೇರಿದಂತೆ ಅನೇಕ ನಾಯಕರು ಜಗದೀಶ್ ಶೆಟ್ಟರ್ ಅವರಿಗೆ ಸಾಥ್ ನೀಡದರು.

ಮೂಡಲಗಿ–ಅರಭಾವಿ ವಿಧಾನಸಭಾ ಕ್ಷೇತ್ರದಲ್ಲಿ ದಿನವಿಡಿ ಜಗದೀಶ ಶೆಟ್ಟರ್ ಅವರು ಕಾಲಿಗೆ ಚಕ್ರ ಕಟ್ಟಿಕೊಂಡು ಅಬ್ಬರದ ಪ್ರಚಾರ ನಡೆಸಿದರು. ಈ ವೇಳೆ ಹೋದಲ್ಲೆಲ್ಲ ಜನ ಅಭೂತಪೂರ್ವ ಬೆಂಬಲ ಸೂಚಿಸಿದ್ದಾರೆ.

## ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆ 110ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ

ಬೆಳಗಾವಿ: ರವಿವಾರ ದಿ: 5 ರಂದು ಮಧ್ಯಾಹ್ನ 4 ಕ್ಕೆ ನೆಹರು ನಗರದಲ್ಲಿನ ಕನ್ನಡ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆ 110ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ ಬೆಳಗಾವಿ ಜಿಲ್ಲಾಧ್ಯಕ್ಷೆ ಶ್ರೀಮತಿ. ಮಂಗಲಾ ಮೆಟಗುಡ್ಡ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಬೆಳಗಾವಿಯ ನಿವೃತ್ತ ಮುಖ್ಯೋಪಾಧ್ಯಾಯರು ಅಶೋಕ ಉಳ್ಳೆಗಡ್ಡಿ ಅವರು "ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರು" ವಿಷಯದ ಕುರಿತು ಉಪನ್ಯಾಸವನ್ನು ನೀಡಲಿದ್ದಾರೆ.

ನಿವೃತ್ತ ಅಭಿಯಂತ ಶ್ರೀ.ಬಸವರಾಜ ಚೆಟ್ಟರ ಹಾಗೂ ನಿವೃತ್ತ ನ್ಯಾಯಾಧೀಶ ಉಲ್ಲಾಸ ಬಾಳೇಕುಂದ್ರಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಹುಕ್ಕೇರಿಯ ಸಾಹಿತಿ ಶ್ರೀಮತಿ.ಲೀಲಾವತಿ ರಜಪೂತ ಅತಿಥಿಗಳಾಗಿ ಉಪಸ್ಥಿತಿರಿರುವರು. ಕನ್ನಡ ಸಾಹಿತ್ಯ ಪರಿಷತ್ ಬೆಳಗಾವಿ ಜಿಲ್ಲೆಯ ಎಲ್ಲ ತಾಲೂಕಾ ಅಧ್ಯಕ್ಷರುಗಳು, ಹಾಗೂ ಜಿಲ್ಲಾ ಕ.ಸಾ.ಪ. ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು, ಕ.ಸಾ.ಪ. ಸರ್ವ ಸದಸ್ಯರು, ಸಾಹಿತಿಗಳು, ಕಲಾವಿದರು ಮತ್ತು ಕನ್ನಡಪರ ಸಂಘಟನೆಗಳು, ಸಮಸ್ತ ಕನ್ನಡ ಮನಸ್ಸುಗಳು ಎಲ್ಲರೂ ಈ ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆತರಬೇಕೆಂದು, ಕಸಾಪ ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀಮತಿ ಮಂಗಲಾ ಮೆಟಗುಡ್ಡ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಸಾಮೂಹಿಕ ವಿವಾಹಗಳು

ಚಂದನಹೊಸೂರು: ಬೆಳಗಾವಿ ತಾಲೂಕಿನ ಚಂದನಹೊಸೂರ ಗ್ರಾಮದ ಕೊಳ್ಳಬಸವನಾಗಲಿಂಗೇಶ್ವರ ಶ್ರೀಗಳ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹಗಳು ಶ್ರೀ ಪರಮ ಪೂಜ್ಯ ನಾಗಯ್ಯಾ ಮಹಾಸ್ವಾಮಿಗಳ ನೇತೃತ್ವದಲ್ಲಿ ಶ್ರೀ ಸಿದ್ಧಲಿಂಗ ದೇವರು ಹಿರೇಮಠ ಚಂದನಹೊಸುರ ಇವರ ಸಾನಿಧ್ಯದಲ್ಲಿ ದಿ. 9ರಂದು ಸಾಯಂಕಾಲ ಭಜನೆ ಹಾಗೂ ಜಾಗರಣೆ ಕಾರ್ಯಕ್ರಮಗಳು ನಡೆಯುವವು.

ಶುಕ್ರವಾರ 10ರಂದು ಮುಂಜಾನೆ 8 ಗಂಟೆಗೆ ಕೊಳ್ಳಬಸವ ನಾಗಲಿಂಗೇಶ್ವರ ಗುದ್ದುಗೆ ಮಹಾರುದ್ರಾಭಿಷೇಕ ಜರಗುವದು. ನಂತರ ಮಧ್ಯಾಹ್ನ 12.30 ಕ್ಕೆ ಸಾಮೂಹಿಕ ವಿವಾಹಗಳು ಅಕ್ಷತಾರೋಹಣ ಜರುಗುವದೆಂದು ಶ್ರೀ ಕೊಳ್ಳಬಸವ ನಾಗಲಿಂಗೇಶ್ವರ ದೇವಸ್ಥಾನ ಅಭಿವೃದ್ಧಿ ಕಮೀಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸ್ತೆಯಲ್ಲೇ ಪತ್ನಿಯನ್ನು ಚಾಕುವಿನಿಂದ ಇರಿದು ಕೊಲೆಗೈದ ಪತಿ




ಬೆಂಗಳೂರು: ಕ್ಷುಲಕ ಕಾರಣಕ್ಕೆ ದಂಪತಿಗಳ ನಡುವೆ ಗಲಾಟೆ ನಡೆದಿದ್ದು, ಗಲಾಟೆಯು ವಿಕೋಪಕ್ಕೆ ತಿರುಗಿ ರಸ್ತೆಯಲ್ಲಿಯೇ ಪತ್ನಿಗೆ ಚಾಕುವಿನಿಂದ ಇರಿದು ಪತಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ಬೆಂಗಳೂ-ರಿನ ಕೋರಮಂಗಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಬೆಂಗಳೂರಿನ ಕೋರಮಂಗಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಮಧ್ಯಾಹ್ನ 3.30 ರ ಸುಮಾರಿಗೆ ಪತ್ನಿ ಇಂದುವನ್ನು ಪತಿ ಬರ್ಬರವಾಗಿ ಹತ್ಯೆಗೈಡಿದ್ದಾನೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಇಬ್ಬರ ನಡುವೆ ಭಿನ್ನಾಭಿಪ್ರಾಯದಿಂದ ಪತಿಯಿಂದ ಇಂದು ದೂರವಾಗಿದ್ದಳು.ಪತ್ನಿ ಜೊತೆ ಜಗಳ ತೆಗೆದು ರಸ್ತೆಯಲ್ಲಿ ಪತಿ ಇರಿದು ಇಂದುವನ್ನು ಕೊಂದಿದ್ದಾನೆ. ಘಟನಾ ಸ್ಥಳಕ್ಕೆ ಕೋರಮಂಗಲ ಪೊಲೀಸರು ಬೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದು ಕೊಲೆ ಕುರಿತಂತೆ ಕೋರಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜಾತ್ರೆಯಲ್ಲಿ ಭಾಗಿಯಾಗಿ ಕುಸ್ತಿ ಪಂದ್ಯ ವಿಕ್ಷೀಸಿದ ಜಗದೀಶ್ ಶೆಟ್ಟರ್



ಬೆಳಗಾವಿ: ಬೆಳಗಾವಿ ತಾಲೂಕಿನ ಯಳ್ಳುರು ಗ್ರಾಮದಲ್ಲಿ ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯ ಆಯೋಜನೆ ಮಾಡಲಾಗಿದ್ದು, ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಜಗದೀಶ್ ಶೆಟ್ಟರ್ ಅವರು ಭಾಗಿ ಆಗಿ ಕುಸ್ತಿ ಪಂದ್ಯ ವೀಕ್ಷಿಸಿದರು. ಈ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ್ ಕವಟಗಿಮಠ ಸಾಥ್ ನೀಡಿದರು.

ಗುರುವಾರ ಸಾಯಂಕಲಾ ಯಳ್ಳುರು ಗ್ರಾಮದ ಹೊರ ವಲಯದಲ್ಲಿ ಚಾಂಗಳೇಶ್ವರ ದೇವಿ ಮತ್ತು ಕಲ್ಮೇಶ್ವರ್ ದೇವರ ಜಾತ್ರೆ ನಿಮಿತ್ತ ಆಯೋಜನೆ ಮಾಡಲಾಗಿದ್ದ ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯವನ್ನು ಜಗದೀಶ್ ಶೆಟ್ಟರ್ ಅವರು ವಿಕ್ಷಣೆ ಮಾಡಿದರು. ಇದಕ್ಕಿಂತ ಮುಂಚೆ ಯಳ್ಳುರು ಗ್ರಾಮದಲ್ಲಿರುವ ಚಾಂಗಳೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದೇವಿ ದರ್ಶನ ಪಡೆದರು.

ಈ ಒಂದು ಕುಸ್ತಿ ಪಂದ್ಯದಲ್ಲಿ ಕರ್ನಾಟಕ, ಹರಿಯಾಣ, ಪಂಜಾಬ, ದೆಹಲಿ, ಮಾಹಾರಾಷ್ಟ್ರ ಸೇರಿದಂತೆ ಅನೇಕ ರಾಜ್ಯದ ಕುಸ್ತಿಪಟುಗಳು ಭಾಗ ವಹಿಸಿದರು. ಜಗದೀಶ್ ಶೆಟ್ಟರ್ ಅವರು ಭೇಟಿ ನೀಡಿದ ವೇಳೆ ಸಾಂಪ್ರದಾಯಕ ವಾದ್ಯಗಳನ್ನು ನುಡಿಸುವ ಮೂಲಕ ಭವ್ಯವಾಗಿ ಸ್ವಾಗತ ಕೋರಲಾಯಿತು.

## ಕೆಎಲ್ಇ ವಿಶ್ವವಿದ್ಯಾಲಯದ ಅಭಿವೃದ್ಧಿಯಲ್ಲಿ ಕಾಂಗ್ರೆಸ್ ಕೊಡುಗೆ ಅಪಾರ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್





ಬೆಳಗಾವಿ: ಬೆಳಗಾವಿ ಅಭಿವೃದ್ಧಿಯಲ್ಲಿ ಕಾಂಗ್ರೆಸ್ ಕೊಡುಗೆ ಅಪಾರ. ಕಾಂಗ್ರೆಸ್ ಸರ್ಕಾರ ಅಂದು ಕೇವಲ ಒಂದು ರೂಪಾಯಿಗೆ ಜಮೀನು ನೀಡಿದ ಫಲವಾಗಿ, ಇಂದು ಕೆಎಲ್ಇ ದೊಡ್ಡ ಆಸ್ಪತ್ರೆ ಹಾಗೂ ವಿಶ್ವವಿದ್ಯಾಲಯವಾಗಿ ಬೆಳೆದಿದೆ. ಇದಕ್ಕೆ ಕಾಂಗ್ರೆಸ್ ಪಕ್ಷ ಕಾರಣ, ಬೆಳಗಾವಿ ಅಭಿವೃದ್ಧಿಯಲ್ಲಿ ಬಿಜೆಪಿ ಕೊಡುಗೆ ಏನು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದರು.

ಕೆಎಲ್ಇ ವಿಶ್ವವಿದ್ಯಾಲಯದ ಜವಾಹರಲಾಲ್ ನೆಹರು ಮೆಡಿಕಲ್ ಕಾಲೇಜಿನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಪರ ಮತಯಾಚಿಸಿ ಮಾತನಾಡಿದ ಸಚಿವರು, ಬೆಳಗಾವಿ ಅಭಿವೃದ್ಧಿಗೆ ಕಾಂಗ್ರೆಸ್ ಕೊಡುಗೆ ಏನು? ಜಗದೀಶ್ ಶೆಟ್ಟರ್ ಕೊಡುಗೆ ಏನು? ಎಂದು ಜನ ತೀರ್ಮಾನಿಸುವರು ಎಂದರು.

ಸಾಮಾಜಿಕ ಜವಾಬ್ದಾರಿ ಅರಿತು ಪ್ರತಿಯೊಬ್ಬರೂ ಮತದಾನ ಮಾಡಬೇಕು. ಹುಬ್ಬಳ್ಳಿ ಜನರಿಂದ ತಿರಸ್ಕಾರಕ್ಕೆ ಒಳಗಾಗಿರುವ ವ್ಯಕ್ತಿಯನ್ನು ಬೆಳಗಾವಿಯಲ್ಲಿ ಗೆಲ್ಲಿಸುವುದು ಸರಿಯಲ್ಲ.

ಮೃಣಾಲ್ ಇನ್ನೂ ಯುವಕ ಬೆಳಗಾವಿ ಅಭಿವೃದ್ಧಿಗೆ ತನ್ನದೇ ಕನಸು ಕಟ್ಟಿಕೊಂಡಿದ್ದಾನೆ ಎಂದು ಹೇಳಿದರು.

ಎರಡು ಬಾರಿ ಸಚಿವರಾಗಿ, ಮುಖ್ಯಮಂತ್ರಿಯಾಗಿ, ರಾಜಕೀಯದಲ್ಲಿ ಸಾಕಷ್ಟು ಅನುಭವ ಹೊಂದಿರುವ ಜಗದೀಶ್ ಶೆಟ್ಟರ್ ಅವರಿಗೆ ಸ್ವಂತ ಶಕ್ತಿ ಎಂಬುದೇ ಇಲ್ಲ. ಪ್ರಚಾರಕ್ಕೆ ಹೋದಲೆಲ್ಲಾ ನರೇಂದ್ರ ಮೋದಿ ಅವರನ್ನು ಪ್ರಧಾನ ಮಂತ್ರಿ ಮಾಡುವ ಸಲುವಾಗಿ ಮತ ನೀಡಬೇಕು ಅಂತ ಹೇಳ್ತಿದ್ದಾರೆ.

ಸ್ವಂತ ಶಕ್ತಿಯೇ ಇಲ್ಲದ ಶೆಟ್ಟರ್ ಅವ-ರಿಂದ ಬೆಳಗಾವಿ ಅಭಿವೃದ್ಧಿ ನಿರೀಕ್ಷಿಸಲು ಸಾಧ್ಯವೇ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದರು.

ರಾಜಕಾರಣವನ್ನು ಎಂದಿಗೂ ಟೈಮ್ ಪಾಸ್ ಆಗಿ ನೋಡಿಲ್ಲ. ಜನಸೇವೆಯೇ ನನಗೆ ವೃತ್ತಿ ಇದ್ದಂತೆ.

ರಾಜಕಾರಣದಲ್ಲಿ ನನ್ನಷ್ಟು ಅವಮಾನ ಎದುರಿಸಿದವರು ಇಲ್ಲ. ಎಲ್ಲವನ್ನೂ ಮೆಟ್ಟಿ ನಿಂತು ಬಂದಿದ್ದೇನೆ.

ನಾನು ಯಾವತ್ತೂ ಜಾತಿ ರಾಜಕೀಯ ಮಾಡಿಲ್ಲ. ಅಭಿವೃದ್ಧಿಯೇ ನನ್ನ ಮೂಲ ಮಂತ್ರ ಎಂದು ಹೇಳಿದರು.

ಈ ವೇಳೆ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್, ಮಾಜಿ ರಾಜ್ಯಸಭಾ ಸದಸ್ಯ ಹಾಗೂ ಬೆಂಗಳೂರು ಉತ್ತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೋ.ರಾಜೀವ್ ಗೌಡ, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಮಾತನಾಡಿದರು.

ಈ ವೇಳೆ ಕಾರ್ಕಳ ಕಾಂಗ್ರೆಸ್ ಮುಖಂಡ ಉದಯ ಕುಮಾರ್ ಶೆಟ್ಟಿ, ಕೆಎಲ್ ಇ ವಿಶ್ವವಿದ್ಯಾಲಯದ ಆಜೀವ ಸದಸ್ಯರಾದ ಡಾ.ವಿ.ಎಸ್. ಸಾಧುನವರ್ ಉಪಸ್ಥಿತರಿದ್ದರು.

## ಬಿಸಿಲಿನ ತಾಪಕ್ಕೆ ರೈತ ಬಲಿ



ರಾಯಚೂರು: ಬಿಸಿಲಿನ ತಾಪದಿಂದ ಹೊಲದ ಕೆಲಸಕ್ಕೆ ತೆರಳಿದ್ದ ರೈತರೊಬ್ಬರು ಸಾವಿಗೀಡಾದ ಘಟನೆ ತಾಲೂಕಿನ ಜಾಲಿಬೆಂಚಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಹನುಮಂತು (45) ಮೃತ ದುರ್ದೈವಿ ಎಂದು ಗುರುತಿಸಲಾಗಿದೆ. ಹೊಲದಿಂದ ಬಣವೆ ಕೆಲಸ ಮುಗಿಸಿಕೊಂಡು ಮನೆಯ ಬಳಿ ಬಂದು ನೀರು ಕುಡಿಯುತ್ತಿದ್ದಂತೆ ಅವರು ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಈ ಹಠಾತ್ ಸಾವಿನಿಂದ ಕಂಗಾಲಾದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಯರಗೇರಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

ರಾಯಚೂರಿನಲ್ಲಿ ಕಳೆದ 15 ವರ್ಷಗಳಲ್ಲೇ ಈ ಬಾರಿ ದಾಖಲೆಯ ಅತೀ ಹೆಚ್ಚು ತಾಪಮಾನ ದಾಖಲಾಗಿದೆ. ಕಳೆದ ಮೂರು ದಿನಗಳಿಂದ ರಾಯಚೂರಿನಲ್ಲಿ ಸರಾಸರಿ 46.7 ಡಿಗ್ರಿ ಸೆಲ್ಸಿಯಸ್ ಬಿಸಿಲಿನ ತಾಪಮಾನ ದಾಖಲಾಗಿದೆ.

## ಬೆಳಗಾವಿ ಕೈಗಾರಿಕೋದ್ಯಮಿಗಳ ಜೊತೆ ಲಕ್ಷ್ಮೀ ಹೆಬ್ಬಾಳಕರ್, ಮೃಣಾಲ ಹೆಬ್ಬಾಳಕರ್ ಸಮಾಲೋಚನೆ



ಬೆಳಗಾವಿ : ಮೇ 7ರಂದು ನಡೆಯಲಿರುವ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸುವಂತೆ ಮಹಿಲಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಬೆಳಗಾವಿಯ ಕೈಗಾರಿಕೊದ್ಯಮಿಗಳಲ್ಲಿ ಮನವಿ ಮಾಡಿದರು.

ಗುರುವಾರ ಸಂಜೆ ನಗರದ ಫೌಂಡ್ರಿ ಕ್ಲಸ್ಟರ್ ಸಭಾಭವನದಲ್ಲಿ ನಡೆದ ಸಭೆಯಲ್ಲಿ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಜೊತೆಗೆ ಪಾಲ್ಗೊಂಡ ಸಚಿವರು, ಕೈಗಾರಿಕೊದ್ಯಮಿಗಳ ಎದು-ರಿಸುತ್ತಿರುವ ಸಮಸ್ಯೆಗಳನ್ನು ಆಲಿಸಿದರು. ಎಲ್ಲ ಸಮಸ್ಯೆಗಳಿಗೆ ನಿಮ್ಮ ಜೊತೆ ನಿಂತು ಪರಿಹಾರ ಒದಗಿಸಲಾಗುವುದು. ಮೃಣಾಲ್ ಹೆಬ್ಬಾಳಕರ್ ಗೆದ್ದು ಬಂದಲ್ಲಿ ಬೆಳಗಾವಿಯನ್ನು ಇಂಡಸ್ಟ್ರಿಯಲ್ ಹಬ್ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು. ಕೈಗಾ-ರಿಕೋದ್ಯಮಿಗಳು ಸೌಲಭ್ಯ ಕೊರತೆಯಿಂದಾಗಿ ಬೆಳಗಾವಿ ಬಿಟ್ಟು ಹೋಗದಂತೆ ನೋಡಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಬೆಂಗಳೂರು ನಂತರ ಬೆಳಗಾವಿಯಲ್ಲಿ ಅತಿಹೆಚ್ಚು ಕೈಗಾರಿಕಾಗಳ ಸ್ಥಾಪನೆಯ ಗುರಿ ಹೊಂದಿದ್ದೇವೆ. ಇರುವ ಕೈಗಾರಿಕೆಗಳಿಗೆ ಆದ್ಯತೆ ಮೇಲೆ ಸೌಲಭ್ಯ ಕಲ್ಪಿಸಲಾಗುವುದು. ನಾನು ಒಮ್ಮೆ ಭರವಸೆ ನೀಡಿದರೆ ಎಂದಿಗೂ ಹಿಂದೆ ಸರಿಯುವುದಿಲ್ಲ. ಈ ಚುನಾವಣೆಯಲ್ಲಿ ಹೊರಗಿನ ವ್ಯಕ್ತಿಗಿಂತ ಸ್ಥಳೀಯ ಅಭ್ಯರ್ಥಿಗೆ ಮತ ನೀಡಿ ನಿಮ್ಮ ಜೊತೆಗೆ ನಾವು ನಿಲ್ಲುತ್ತೇವೆ ಎಂದು ಅವರು ಹೇಳಿದರು.

ಬೆಳಗಾವಿ ಫೌಂಡರಿ ಕ್ಲಸ್ಟರ್ ಅಧ್ಯಕ್ಷ ರಾಮ ಭಂಡಾರೆ, ಬೆಳಗಾವಿ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಸಿ.ಸಿ.ಹೊಂಡದಕಟ್ಟಿ, ಶ್ರೀಧರ್ ಉಪ್ಪಿನ್, ಜಯಂತ್ ಹುಂಬರವಾಡಿ, ಮನೋಜ್ ಮತ್ತಿಕೊಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಚಲಿಸುತ್ತಿರುವಾಗಲೇ ಬಸ್‌ನಿಂದ ಕಳಚಿಕೊಂಡ ಚಕ್ರಗಳು: ಬೆಚ್ಚಿಬಿದ್ದ ಪ್ರಯಾಣಿಕರು

ಆನೇಕಲ್: ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಸಮಂದೂರು ಬಳಿ ಚಲಿಸುತ್ತಿದ್ದ ಸಾರಿಗೆ ಬಸ್‌ನ (ಚಕ್ರ ಕಳಚಿಕೊಂಡು ಬಿದ್ದಿದೆ. ಇದರಿಂದಾಗಿ ಬಸ್‌ನಲ್ಲಿದ್ದ 20ಕ್ಕೂ ಅಧಿಕ ಪ್ರಯಾಣಿಕರು ಬೆಚ್ಚಿಬಿದ್ದಿದ್ದಾರೆ.

ಚಾಲಕ ಸಮಯಪ್ರಜ್ಞೆ ಮೆರೆದು ತಕ್ಷಣವೇ ವಾಹನ ನಿಲ್ಲಿಸಿದ್ದಾರೆ. ಬಸ್ ತುಂಬಾ ವೇಗವಾಗಿಯೇನೂ ಹೋಗುತ್ತಿರಲಿಲ್ಲ. ಒಂದೊಮ್ಮೆ ವೇಗವಾಗಿ ಸಾಗುತ್ತಿದ್ದರೆ ಕಳಚಿಕೊಂಡ ಚಕ್ರ, ವೇಗವಾಗಿ ಹೋಗಿ ಯಾವುದೋ ವಾಹನಕ್ಕೆ ಅಥವಾ ಪಾದಚಾರಿಗಳಿಗೆ ಬಡಿದು ದೊಡ್ಡ ಅನಾಹುತ ಸಂಭವಿಸುವ ಅಪಾಯವಿತ್ತು. ಅದೃಷ್ಟವಶಾತ್ ಅಂತ ಅವಘಡ ಸಂಭವಿಸಿಲ್ಲ. ಬಸ್ಸಿನ ಹಿಂಬದಿ ಒಮ್ಮೆಗೇ ನೆಲಕ್ಕೆ ಬಡಿದಿದ್ದ-ರಿಂದ ಕೆಲವರಿಗೆ ಸಣ್ಣ ಪುಟ್ಟ ಗಾಯಗಳಾಗಿತ್ತು.




ಆನೇಕಲ್ ಘಟಕಕ್ಕೆ ಸೇರಿದ ಕೆಎಸ್ಆರ್ಟಿಸಿ ಬಸ್ ಆನೇಕಲ್ ಕಡೆಯಿಂದ ಸಮಂದೂರು ಮಾರ್ಗವಾಗಿ ಹೊರಟಿತ್ತು.

ಸಮಂದೂರು ಸಮೀಪ ಬರುತ್ತಿದ್ದಾಗ ಏಕಾಏಕಿ ಟೈರ್‌ಗಳು ಕಳಚಿಕೊಂಡಿವೆ. ಕೂಡಲೇ ಚಾಲಕ ಬಸ್ ನಿಲ್ಲಿಸಿದ್ದಾರೆ. ಚಾಲಕನು ಏಕಾಏಕಿ ಬ್ರೇಕ್ ಹಾಕಿದ ಕಾರಣ ಜನ ಗಲಿಬಿಲಿಗೊಂಡರು.

ಕೂಡಲೇ ಕೆಳಗಿಳಿದು ನೋಡಿದಾಗ ಬಸ್ ಚಕ್ರ ಬಿದ್ದಿದ್ದನ್ನು ಕಂಡು ಮತ್ತಷ್ಟು ಗಾಬರಿಗೊಂಡರು. ಅಬ್ಬಾ ಯಾವುದೇ ಅಪಾಯ ಎದುರಾಗಲಿಲ್ಲ ಎಂದು ನಿಟ್ಟುಸಿರುಬಿಟ್ಟರು.

ಕಂಡಿಷನ್ ಇಲ್ಲದ ಬಸ್‌ಗಳನ್ನು ರಸ್ತೆಗಿಳಿಸುವ ಡಿಪೋ ಅಧಿಕಾರಿಗಳ ಬೇಜವಬ್ದಾರಿತನಕ್ಕೆ ಕಿಡಿಕಾರಿದರು.

ಪ್ರಯಾಣಿಕರ ಜೀವದ ಜತೆ ಚೆಲ್ಲಾಟವಾಡುವ, ಬಸ್ ಚಾಲಕ ಹಾಗೂ ನಿರ್ವಾಹಕರ ಜೀವಕ್ಕೂ ಗ್ಯಾರಂಟಿ ಇಲ್ಲದಂತಾಗಿದೆ ಎಂದು ಆಕ್ರೋಶ ಹೊರಹಾಕಿದರು.

## ಹುಕ್ಕೇರಿಯಲ್ಲಿ ಬೀದಿಗಿಳಿದ ಮಠಾಧೀಶರು: ಬುಗಿಲೆದ್ದ ಭಕ್ತರ ಆಕ್ರೋಶ



ಹುಕ್ಕೇರಿ: ಪಟ್ಟಣದ ಧಾರ್ಮಿಕ ಶ್ರದ್ಧಾ ಕೇಂದ್ರವೊಂದರಲ್ಲಿ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಕರ ಮತ್ತವರ ಕಾರ್ಯಕರ್ತರು ಅಕ್ರಮವಾಗಿ ನುಗ್ಗಿ ನಡೆಸಿದ್ದಾರೆ ಎನ್ನಲಾದ ದಾಂಧಲೆ ಪ್ರಕರಣ ಖಂಡಿಸಿ ನಾಡಿನ ವಿವಿಧ ಮಠಾಧೀಶರು ಗುರುವಾರ ಬೀದಿಗಿಳಿದಿದ್ದಾರೆ.

ಇದೇ ವೇಳೆ ರಾಜ್ಯದ ವಿವಿಧ ಮೂಲೆಗಳಿಂದ ಆಗಮಿಸಿದ ಸಹಸ್ರಾರು ಭಕ್ತರು ಸ್ವಾಮೀಜಿಗಳ ನೇತೃತ್ವದಲ್ಲಿ ಹುಕ್ಕೇರಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ಇದರೊಂದಿಗೆ ಕಳೆದ ನಾಲ್ಕು ದಿನಗಳಿಂದ ಮಡುಗಟ್ಟಿದ ಭಕ್ತರ ಸಿಟ್ಟು ಬುಗಿಲೆದ್ದಿದ್ದು ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ಇಲ್ಲಿನ ಕೋರ್ಟ್ ಸರ್ಕಲ್ ಬಳಿ ಜಮಾಯಿಸಿದ ಮಠಾಧೀಶರು ಹಾಗೂ ಭಕ್ತ ಸಮೂಹ, ಘಟನೆಗೆ ಕಾರಣವಾದ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಕರ ಮತ್ತವರ ಬೆಂಬಲಿಗ ಕಾರ್ಯಕರ್ತರನ್ನು ಕೂಡಲೇ ಬಂಧಿಸಬೇಕು. ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳಲು ಹಿಂದೇಟು ಹಾಕಿದರೆ ಉಗ್ರ ಹೋರಾಟ ಮಾಡಲಾಗುವುದು ಎಚ್ಚರಿಕೆ ನೀಡಿದರು.

ಹೊರವಲಯದ ಕ್ಯಾರಗುಡ್ಡ್ ಬಳಿಯ ಅವುಜೀಕರ ಧ್ಯಾನ ಯೋಗಾಶ್ರಮದ ಮಠದಲ್ಲಿ ಚಿಕ್ಕೋಡಿ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಕರ ಮತ್ತವರ ಕಾರ್ಯಕರ್ತರು ಏಕಾಏಕಿ ನುಗ್ಗಿ ಮನಬಂದಂತೆ ದಾಂಧಲೆ ನಡೆಸಿದ್ದಾರೆ. ಮಠದ ಮಲ್ಲೇಶ್ವರ ಮಹಾರಾಜರೊಂದಿಗೆ ಅಸಭ್ಯವಾಗಿ ವರ್ತಿಸಿ, ಅವ್ಯಾಚ ಶಬ್ದಗಳಿಂದ ನಿಂದಿಸಿ ಹಲ್ಲೆಗೆ ಯತ್ನಿಸಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಘಟನೆ ಕುರಿತು ಪ್ರಕರಣ ದಾಖಲಿಸಿ ನಾಲ್ಕು ದಿನ ಕಳೆದರೂ ಆರೋಪಿಗಳ ವಿರುದ್ಧ ಯಾವುದೇ ಕ್ರಮಕೈಗೊಂಡಿಲ್ಲ. ನೀತಿ ಸಂಹಿತೆ ಜಾರಿಯಲ್ಲಿದ್ದ ವೇಳೆ ಧಾರ್ಮಿಕ ಕೇಂದ್ರಗಳನ್ನು ಬಳಸಿಕೊಳ್ಳುವಂತಿಲ್ಲ. ಈ ಘಟನೆ ಹಿರಿಯ ಅಧಿಕಾರಿಯಾಗಿದ್ದ ಕಲ್ಲೋಳಕರಗೆ ಶೋಭೆ ತರುವಂಥದ್ದಲ್ಲ. ಹೀಗಾಗಿ ಕೂಡಲೇ ಪಕ್ಷೇತರ ಕಲ್ಲೋಳಕರ ಅವರನ್ನು ಸ್ಪರ್ಧಾ ಕಣದಿಂದ ಅಮಾನತುಗೊಳಿಸಿ ಬಂಧಿಸಬೇಕು. ಇಂಥ ಘಟನೆ ಮರುಕಳಿಸದಂತೆ ಎಚ್ಚ-ರಿಕೆ ವಹಿಸಬೇಕು ಎಂದು ಮಠಾಧೀಶರು ಮತ್ತು ಭಕ್ತರು ಆಗ್ರಹಿಸಿದರು.

ಮಠದ ಉತ್ತರಾಧಿಕಾರಿ ಅಭಿನವ ಮಂಜುನಾಥ ಸ್ವಾಮೀಜಿ ಮಾತನಾಡಿ, ಕಲ್ಲೋಳಕರ ಮತ್ತು ಅವರ ಬೆಂಬಲಿಗರು ಮಠದೊಳಗೆ ಅಸಭ್ಯ ವರ್ತನೆ ತೋರಿ ದುಂಡಾವರ್ತನೆ ಮೆರೆದಿದ್ದಾರೆ. ಮಠದ ಆಸ್ತಿ-ಪಾಸ್ತಿ ಹಾನಿಗೂ ಯತ್ನಿಸಿದ್ದಾರೆ. ಈ ಮೂಲಕ ಶ್ರೀಮಠದ ಪರಂಪರೆ ಮತ್ತು ಹಿಂದೂ ಧರ್ಮಕ್ಕೆ ಅವಮಾನ ಮಾಡಿದ್ದಾರೆ. ಅಂಥವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಇಂಚಗೇರಿ ಸಂಪ್ರದಾಯ ಹೊಂದಿದ ನಾಡಿನ ಮೂರು ಸಾವಿರ ಮಠಗಳಿಂದ ಉಗ್ರ ಹೋರಾಟ ಮಾಡಲಾಗುವುದು ಎಚ್ಚರಿಸಿದರು.

ಶ್ರೀಮಠದ ಮಲ್ಲೇಶ್ವರ ಸ್ವಾಮೀಜಿ, ಬೆಳವಿ ಮೃತ್ಯುಂಜಯ ಸ್ವಾಮೀಜಿ, ಶಿವಾಪುರದ ಕಾಡಸಿದ್ದೇಶ್ವರ ಸ್ವಾಮೀಜಿ, ನೂಲದ ಗುರುಸಿದ್ದೇಶ್ವರ ಸ್ವಾಮೀಜಿ, ಝುಂಗಟಿಹಾಳ ಚಂದ್ರಶೇಖರ ಸ್ವಾಮೀಜಿ, ಮಾಜಿ ಸಚಿವ ಶಶಿಕಾಂತ ನಾಯಿಕ, ಮುಖಂಡರಾದ ಶಿವರಾಜ ನಾಯಿಕ, ಕೆ.ಬಿ.ಬಡಿಗೇರ, ಮಹೇಶ ಬಡಗಾಂವಿ, ಋತುರಾಜ ಕೋಟೇವಾಲೆ, ಶಿವಾನಂದ ಪಾಟೀಲ, ಶಾಂತಿನಾಥ ಚೌಗಲಾ, ಕಿರಣ ಗೂಡಸೆ, ಶಿವಪ್ಪಾ ಮಗದುಮ್ಮ ಮತ್ತಿತರರು ಉಪಸ್ಥಿತರಿದ್ದರು.

ತಹಸೀಲದಾರ ಬಲರಾಮ ಕಟ್ಟಿಮನಿ ಅವರಿಗೆ ಪ್ರತಿಭಟನಾಕಾರರು ಮನವಿ ಸಲ್ಲಿಸಿದರು. ಕೋರ್ಟ್ ಸರ್ಕಲ್ ಬಳಿ ಮಾನವ ಸರಪಳಿ ನಿರ್ಮಿಸಿ ಆಕ್ರೋಶ ಹೊರಹಾಕಿದರು. ಇದರಿಂದ ಕೆಲ ವಾಹನ ಮತ್ತು ಜನ ಸಂಚಾರಕ್ಕೆ ತೀವ್ರ ಅಡಚಣೆಯಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಸಿಪಿಐ ಜಯಂತ ಗೌಳಿ ನೇತೃತ್ವದಲ್ಲಿ ಬಿಗು ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

## ಬೆಳಗಾವಿಯಲ್ಲಿ ಕನಿಷ್ಟ ಎರಡೂವರೆ ಲಕ್ಷ ಮತಗಳ ಅಂತರದಿಂದ ಮೃಣಾಲ ಹೆಬ್ಬಾಳಕರ್ ಗೆಲುವು: ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ

ಬೆಳಗಾವಿ: ದಿನದಿಂದ ದಿನಕ್ಕೆ ಕಾಂಗ್ರೆಸ್ ಪರ ಜನರ ಒಲವು ಹೆಚ್ಚಾಗುತ್ತಿದೆ. ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಮೃಣಾಲ ಹೆಬ್ಬಾಳಕರ್ ಕನಿಷ್ಟ ಎರಡೂವರೆ ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ ನಗರದ ವಿವಿಧೆಡೆ ಬುಧವಾರ ಸಂಜೆ ಪ್ರಚಾರ ನಡೆಸಿದ ಸಚಿವರು, ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಎಲ್ಲ 8 ವಿಧಾನ ಸಭಾ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆ ಮುನ್ನಡೆ ಸಿಗಲಿದೆ. ಯುವಕರಿಂದ ಹಿಡಿದು, ಹಿರಿಯರು, ಮಹಿಳೆಯರು ಎಲ್ಲರೂ ಈ ಬಾರಿ ಪಕ್ಷಾತೀತವಾಗಿ ಮೃಣಾಲ ಹೆಬ್ಬಾಳಕರ್ ಬೆಂಬಲಿಸಲು ಮುಂದಾಗಿದ್ದಾರೆ. ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳು ಪ್ರತಿ ಮನೆಯನ್ನೂ ತಲುಪಿದೆ. ನುಡಿದಂತೆ ನಡೆದಿದ್ದಕ್ಕಾಗಿ ಪಕ್ಷದ ಬಗ್ಗೆ ಜನರಲ್ಲಿ ವಿಶ್ವಾಸ ಮೂಡಿದೆ. ಜೊತೆಗೆ ನಾನು ಗ್ರಾಮೀಣ ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕೆಲಸಗಳನ್ನು ನೋಡಿ ಜನರು ಮೃಣಾಲ್ ಪರ ಒಲವು ತೋರಿಸುತ್ತಿದ್ದಾರೆ. ಯುವಕನಾಗಿರುವ ಮೃಣಾಲ್ ಕ್ಷೇತ್ರಕ್ಕಾಗಿ ಖಂಡಿತ ಕೆಲಸ ಮಾಡಲಿದ್ದಾನೆ ಎನ್ನುವ ಭಾವನೆ ಜನರಲ್ಲಿ ಮೂಡಿದೆ ಎಂದು ತಿಳಿಸಿದರು.

ಹಿಂದಿನಿಂದಲೂ ಬೆಳಗಾವಿಗೆ ಬರಬೇಕಿದ್ದ ಅಭಿವೃದ್ಧಿ ಯೋಜನೆಗಳು ಹುಬ್ಬಳ್ಳಿ ಪಾಲಾಗುತ್ತಿರುವ ಕುರಿತು ಬೆಳಗಾವಿ ಜನರು ಹೋರಾಟ ನಡೆಸುತ್ತಲೇ ಬಂದಿದ್ದಾರೆ. ವಿಪರ್ಯಾಸವೆಂದರೆ ಆ ರೀತಿ ಇಲ್ಲಿಂದ ಎಲ್ಲವನ್ನೂ ಕಿತ್ತುಕೊಂಡು ಹೋಗಲು ಕಾರಣ-ರಾದವರೇ ಇಂದು ಬಿಜೆಪಿ ಅಭ್ಯರ್ಥಿಯಾಗಿ



ಕಣಕ್ಕಿಳಿದಿದ್ದಾರೆ. ಅಂತವರನ್ನು ಬೆಂಬಲಿಸಿದರೆ ಬೆಳಗಾವಿಗೆ ಎಂತಹ ತೊಂದರೆ ಬರಲಿದೆ ಎನ್ನುವುದನ್ನು ನಾವೆಲ್ಲ ಯೋಚಿಸಬೇಕಾಗಿದೆ. ಹಾಗಾಗಿ ಸ್ಥಳೀಯ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸುವ ಮೂಲಕ ಬೆಳಗಾವಿಗೆ ಆಗುತ್ತಿರುವ ಅನ್ಯಾಯವನ್ನು ತಡೆಯಬೇಕಾಗಿದೆ ಎಂದು ಹೆಬ್ಬಾಳಕರ್ ಮನವಿ ಮಾಡಿದರು.

ಮೇ 7ರಂದು ನಡೆಯಲಿರುವ ಚುನಾವಣೆಯಲ್ಲಿ ಎಲ್ಲರೂ ತಪ್ಪದೆ ಮತದಾನ ಮಾಡಬೇಕು. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಿ, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕೈಜೋಡಿಸಿ ಎಂದು ಸಚಿವರು ಮನವಿ ಮಾಡಿದರು.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಆಜಮ್ ನಗರದಲ್ಲಿ ನಡೆದ ಸಭೆಯಲ್ಲಿ ಶಾಸಕ ಆಸೀಫ್ ಸೇಠ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ರಾಜ್ಯ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಮೊಹಮ್ಮದ್ ನಲ್ಪಾಡ್, ಸ್ಥಳೀಯ ನಿವಾಸಿಗಳು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ನಂತರ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಭಾಗ್ಯನಗರದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಂ.ಜೆ.ಪ್ರದೀಪ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಪರಶುರಾಮ ಡಾಗೆ, ಚಂದ್ರಹಾಸ ಅಣವೇಕರ್, ಕಿರಣ್ ಪಾಟೀಲ್, ವಿಠಲ್ ಪಾವಸ್ಕರ್, ಶೀತಲ್ ರಾಮ್ ಶೆಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದಾದ ನಂತರ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಅನಗೋಳದ ಕುರುಬರ ಗಲ್ಲಿಯಲ್ಲಿ ಪ್ರಚಾರ ಸಭೆ ನಡೆಯಿತು. ಈ ವೇಳೆ ಎಂ.ಜೆ.ಪ್ರದೀಪ್ ಅಜೀಜ್ ಮುಮೇನ್, ಶಬ್ಬಿರ್ ಶೇಖ್, ಸಾಧಿಕ್ ತಿಗಡಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗಟ್ಟಿಯಾಗಿ ಬಿಜೆಪಿಗೆ ವೋಟ್ ಮಾಡಿ, ಕಾಂಗ್ರೆಸ್ಸಿಗರ ಸುಳ್ಳು ವದಂತಿಗಳನ್ನು ನಂಬಬೇಡಿ: ಶಾಸಕ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಕಾಂಗ್ರೆಸ್ಸಿಗರು ನನ್ನ ವಿರುದ್ಧವೇ ಸುಳ್ಳು ಪ್ರಚಾರ ಮಾಡುತ್ತಿದ್ದು, ಅವುಗಳನ್ನು ಬದಿಗೊತ್ತಿ ರಾಷ್ಟ್ರದ ಭವಿಷ್ಯದ ಹಿತದೃಷ್ಟಿಯಿಂದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರಿಗೆ ಮತ ನೀಡುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸಲು ಶಾಸಕ ಹಾಗೂ ಜಿಲ್ಲಾ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಮತದಾರರರಲ್ಲಿ ಕೋರಿಕೊಂಡರು.

ಬುಧವಾರ ಸಂಜೆ ಪಟ್ಟಣದ ಬಸವ ಮಂಟಪದಲ್ಲಿ ಬಿಜೆಪಿ ಅಭ್ಯರ್ಥಿ ಪರ ಮತ ಯಾಚಿಸಿ ಮಾತನಾಡಿದ ಅವರು, ಕಾಂಗ್ರೇಸ್ನ ಅಪಪ್ರಚಾರಗಳಿಗೆ ಕಿವಿಗೊಡಬೇಡಿ ಎಂದು ಹೇಳಿದರು,

ಕಳೆದ ಎ.28 ರಂದು ಬೆಳಗಾವಿಯಲ್ಲಿ ಜರುಗಿದ ಪ್ರಧಾನಿಗಳ ಚುನಾವಣಾ ರ್ಯಾಲಿಯಲ್ಲಿ ಅರಭಾವಿ ಮತಕ್ಷೇತ್ರದ ಕಾರ್ಯಕರ್ತರು ಗೈರಾಗಿರುವದನ್ನೇ ಬಂಡವಾಳ ಮಾಡಿಕೊಂಡು ಅಪಪ್ರಚಾರವನ್ನು ನಮ್ಮ ವಿರೋಧಿಗಳು ಮಾಡುತ್ತಿದ್ದಾರೆ. ಸದರಿ ಮೋದಿಯವರ ಕಾರ್ಯಕ್ರಮ ಸಂಜೆ ಸಮಯದಲ್ಲಿ ನಿಗದಿಯಾಗಿತ್ತು.

ಹೀಗಾಗಿ ಅಗತ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಮಾಡಿಕೊಳ್ಳುವಂತೆ ನಮ್ಮ ಕಾರ್ಯಕರ್ತ-ರಿಗೆ ಮೊದಲೇ ಹೇಳಲಾಗಿತ್ತು. ಆದರೆ ಕಾರ್ಯಕ್ರಮದ ವೇಳಾಪಟ್ಟಿಯು ಸಂಜೆಯ ಬದಲಿಗೆ ಮುಂಜಾನೆ 10 ಗಂಟೆಗೆ ನಿಗದಿಯಾಗಿತ್ತು. ನಮ್ಮ ಕಾರ್ಯಕರ್ತರಿಗೆ ಹೋಗಲು ಅನಾನುಕೂಲವಾಗಿದ್ದರಿಂದ ಈ ನಿರ್ಧಾರವನ್ನು ಕೈಗೊಳ್ಳಲಾಯಿತು. ಇದನ್ನು ಕಾಂಗ್ರೆಸ್ ಪಕ್ಷದವರು ಸುಳ್ಳು ವದಂತಿಗಳನ್ನು ಹಬ್ಬಿಸಿಕೊಂಡು ತಿರುಗಾಡುತ್ತಿದ್ದಾರೆ. ನಮ್ಮ ಕಾರ್ಯಕರ್ತರಲ್ಲಿ ಗೊಂದಲಗಳನ್ನು ಸೃಷ್ಟಿಸುತ್ತಿದ್ದಾರೆ. ವಿರೋಧಿಗಳಿಗೆ ಹೇಳಲು ಯಾವುದೇ ಸ್ಪಷ್ಟ ವಿಚಾರಗಳಿಲ್ಲ. ಇವುಗಳ ಕಡೆಗೆ ಗಮನ ನೀಡದೇ ಮೇ-7 ರಂದು ನಡೆಯುವ ಚುನಾವಣೆಯಲ್ಲಿ ಹಿಂದೆ-ಮುಂದೆ ನೋಡದೇ ಗಟ್ಟಿಯಾಗಿ ಬಿಜೆಪಿ ಮತ ನೀಡುವಂತೆ ಕರೆ ನೀಡಿದರು.



ಜಗದೀಶ ಶೆಟ್ಟರ್ ಅವರದ್ದು ಉತ್ತಮ ನಡುವಳಿಕೆಯಾಗಿದೆ. ಸಿಟ್ಟಂತೂ ಅವರ ಜೀವನದಲ್ಲಿಯೇ ಬರುವುದಿಲ್ಲ. ಸೌಜನ್ಯ ಸ್ವಭಾವದವರಾಗಿದ್ದಾರೆ. ಇವ-ರಿಗೆ ಮತ ಕೊಟ್ಟರೆ ಮೋದಿಯವರಿಗೆ ನೀಡಿದಂತಾಗುತ್ತದೆ. ಸಂಸತ್ತಿಗೆ ಆಯ್ಕೆಯಾಗಿ ಹೋದರೆ ನಮ್ಮದೇ ಸರಕಾರವಿರುತ್ತದೆ. ಶೆಟ್ಟರ್ ಅವರ ಅನುಭವವನ್ನು ಪಡೆದು ಅಭಿವೃದ್ಧಿ ಕಾರ್ಯಗಳನ್ನು ಮಾಡಿಸಬಹುದು. ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ ಶೆಟ್ಟರ್ ಅವರು ನಮ್ಮ ಬೆಳಗಾವಿಯಿಂದ ಸ್ಪರ್ಧೆ ಮಾಡಿರುವುದು ನಮ್ಮ ಅದೃಷ್ಟವಾಗಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಮತ ಯಾಚಿಸಿ ಮಾತನಾಡಿದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಮೂಡಲಗಿ ಇತಿಹಾಸದಲ್ಲಿ ದಾಖಲೆ ಬರೆಯುವ ಸಮಾವೇಶ ಇದಾಗಿದೆ. ಈ ದೇಶದ ಭವಿಷ್ಯ ನರೇಂದ್ರ ಮೋದಿ ಮೇಲೆ ನಿಂತಿದೆ. ಮೋದಿ ಅವರಂತಹ ನಾಯಕ ನಮಗೆ ಸಿಕ್ಕಿದ್ದು ನಮ್ಮ ಸೌಭಾಗ್ಯ. ನರೇಂದ್ರ ಮೋದಿ ನಮ್ಮ ನಾಯಕ ಮುಂದಿನ ಪ್ರಧಾನಿ ಆದರೆ, ಇಂಡಿಯಾ ಮೈತ್ರಿಕೂಟದ ನಾಯಕ ಯಾರು..? ಎಂದು ಪ್ರಶ್ನಿಸಿದರು. ನಮಗೆ ನಿಜವಾದ ಗ್ಯಾರಂಟಿ ದೇಶದ ರಕ್ಷಣೆ, ದೇಶದ ಸುಭದ್ರತೆ, ದೇಶದ ಗೌರವ ಇದುವೇ ಮೋದಿಯವರ ಗ್ಯಾರಂಟಿ ಎಂದು ತಿಳಿಸಿದರು.

ಕೇಂದ್ರದ ಅನೇಕ ಯೋಜನೆಗಳು ಎಲ್ಲಾ ವರ್ಗದವರಿಗೆ ಸಿಗುತ್ತಿದೆ. ಬಿಜೆಪಿ ಸರ್ಕಾರ ಎಲ್ಲಾ ವರ್ಗದವರಿಗೆ ಎಲ್ಲಾ ಯೋಜನೆಗಳು ನೀಡಿದೆ. ಕಾಂಗ್ರೆಸ್ ಅಲ್ಪಸಂಖ್ಯಾತರ ತುಷ್ಟಿಕರಣ ಮಾಡುತ್ತಿದೆ. ವಿಧಾನ ಸಭೆಯಲ್ಲಿ ಪಾಕಿಸ್ತಾನ ಜಿಂದಾಬಾದ ಅಂದರೂ ಅದನ್ನು ಖಂಡಿಸುವ ಕೆಲಸ ಕಾಂಗ್ರೆಸ್ ಮಾಡಲಿಲ್ಲ. ನಾನು ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಆಯ್ಕೆಯಾದ ನಂತರ ಬೆಳಗಾವಿಯನ್ನು ಸಾಕಷ್ಟು ಅಭಿವೃದ್ಧಿ ಮಾಡುತ್ತೇನೆ. ಬೆಳಗಾವಿಯನ್ನು ಬೆಂಗಳೂರಿನ ಹಾಗೆ ರಾಜ್ಯದ ಎರಡನೇ ರಾಜಧಾನಿಯನ್ನಾಗಿ ಮಾಡುತ್ತೇನೆ ಎಂದು ಪ್ರಮಾಣ ಮಾಡಿದರು.

ಈ ಸಂದರ್ಭದಲ್ಲಿ ಯುವ ನಾಯಕ ಸರ್ವೋತ್ತಮ ಜಾರಕಿಹೊಳಿ, ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಸ ಪಾಟೀಲ, ಮಂಡಳ ಅಧ್ಯಕ್ಷ ಮಹಾದೇವ ಶೆಕ್ಕಿ, ಜೆಡಿಎಸ್ ಬ್ಲಾಕ್ ಅಧ್ಯಕ್ಷ ಪ್ರಕಾಶ ಕಾಳಶೆಟ್ಟಿ, ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು. ಪರಸಪ್ಪ ಬಬಲಿ ಕಾರ್ಯಕ್ರಮ ನಿರೂಪಿಸಿದರು

## 7 ಹಂತದಲ್ಲಿ ಮತದಾನ ನಡೆಸುವ ಅಗತ್ಯ ಏನಿತ್ತು: ವೀರಪ್ಪ ಮೊಯ್ಲಿ ಕಿಡಿ

ಬೆಳಗಾವಿ: ತಂತ್ರಜ್ಞಾನ ಯುಗದಲ್ಲಿ ದೇಶಾದ್ಯಂತ ಏಕಕಾಲಕ್ಕೆ ಚುನಾವಣೆ ನಡೆಸಬಹುದಿತ್ತು. ಅದನ್ನೆಲ್ಲ ಬಿಟ್ಟು ಕಾಶ್ಮೀರದಿಂದ ಕನ್ಯಾಕುಮಾ-ರಿವರೆಗೂ ಚುನಾವಣೆಯ ಪ್ರಚಾರ ನಡೆಸಲು ಅನುಕೂಲ ಮಾಡಿಕೊಳ್ಳುವ ಸಲುವಾಗಿ 7 ಹಂತದಲ್ಲಿ ಮತದಾನ ನಡೆಸಲಾಗುತ್ತಿದೆ, ಬಿಜೆಪಿಗರು ಅವ-ರಿಗೆ ಬೇಕಾದ ಹಾಗೇ ಚುನಾವಣೆ ನಡೆಸುತ್ತಿದ್ದಾರೆ ಎಂದು ಎಂದು ಮಾಜಿ ಸಿಎಂ ವೀರಪ್ಪ ಮೊಯ್ಲಿ ಕಿಡಿಕಾರಿದರು.

ಇಲ್ಲಿನ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಲೋಕಸಭಾ ಚುನಾವಣೆ ರಾಷ್ಟ್ರದ ಮಹತ್ವದ ಚುನಾವಣೆಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರೇ ಮುಂದುವರೆಸಿಕೊಂಡು ಹೋದರೆ ಎಲ್ಲಾ ಚುನಾವಣೆ ಒಂದೇ




ಸಲ ನಡೆಸಿದರು ಅಚ್ಚರಿ ಇಲ್ಲ ಎಂದರು.

ನರೇಂದ್ರ ಮೋದಿ ಆಡಳಿತದಲ್ಲಿ ದೇಶದಲ್ಲಿ ಮಿಲಿಟರಿ ಆಡಳಿತ ತರಲು ಹೊರಟಿದ್ದಾರೆ. ಬಿಜೆಪಿ ಪ್ರಣಾಳಿಕೆಯಲ್ಲಿ ಮೋದಿ ಗ್ಯಾರಂಟಿ ಎಂದು ನಮೂದಿಸಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬದಲಾವಣೆ ಮಾಡುತ್ತಿದ್ದಾರೆ. ಜೆಡಿಎಸ್ ಜೊತೆಗೆ ಮೈತ್ರಿ ಮಾಡಿಕೊಂಡಿರುವುದನ್ನು ಮರೆತ್ತಿದ್ದಾರೆ ಎಂದರು.

ಬಿಜೆಪಿ ಪ್ರಣಾಳಿಕೆ ಪಕ್ಷದಲ್ಲ. ಇದು ಮೋದಿ ಗ್ಯಾರಂಟಿ. ಇದನ್ನು ಜನ ನಂಬುವರೆ ಎಂದು ಪ್ರಶ್ನಿಸಿದ ಅವರು, ಚುನಾವಣಾ ಬಾಂಡ್ ಮೇಲೆ ಕೋಟ್ಯಂತರ ರೂ. ಭ್ರಷ್ಟಾಚಾರ ಮಾಡಿದ್ದಾರೆ ಇದರ ಬಗ್ಗೆ ಕೇಂದ್ರ ಸರಕಾರ ಯಾವ ಕ್ರಮ ಕೈಗೊಂಡಿದೆ ಎಂದರು.

ಕೇಂದ್ರದಲ್ಲಿ ಯುಪಿಎ ಸರಕಾರದ ಸಂದರ್ಭದಲ್ಲಿ ಪ್ರಧಾನಿಯಾಗಿದ್ದ ಮನಮೋಹನ್ ಸಿಂಗ್ ಅವರು ರೈತರ ಮೇಲಿನ ಸಂಪೂರ್ಣ ಸಾಲಾ ಮನ್ನಾ ಮಾಡಲಾಗಿತ್ತು. ಆದರೆ ನರೇಂದ್ರ ಮೋದಿ ಒಬ್ಬ ರೈತನ ಸಾಲ ಮಾಡಿಲ್ಲ. ಇದು ಜನರಿಗೆ ಕೆಟ್ಟ ದಿನ, ಮೋದಿಗೆ ಒಳ್ಳೆಯ ದಿನವಾಗಿದೆ ಎಂದರು.

ಹಾಸನದ ಎನ್ ಡಿಎ ಮೈತ್ರಿಕೂಟದ ಅಭ್ಯರ್ಥಿ ಪ್ರಜ್ವಲ್ ರೇವಣ್ಣನ ಕರ್ಮಕಾಂಡದಿಂದ ಇಡೀ ಕರ್ನಾಟಕದ ರಾಜಕೀಯದ ಹೆಸರನ್ನು ಕೆಡಿಸಿದ್ದಾನೆ. ಕಳೆದ 2014ರ ಲೋಕಸಭಾ ಚುನಾವಣೆಯಲ್ಲಿ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ನರೇಂದ್ರ ಮೋದಿ ಅವರು ಪ್ರಧಾನಿಯಾದರೆ ದೇಶ ಬಿಡುತ್ತೇನೆ ಎಂದಿದ್ದರು. ಈಗ ಅವರ ಪಕ್ಕ ಕುಳಿತುಕೊಂಡು ಚುನಾವಣೆಯ ಪ್ರಚಾರ ನಡೆಸಿದ್ದಾರೆ ಎಂದರು.

ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಯಾರೂ ಪಾತ್ರ ವಹಿಸಿದ್ದಾರೆ ಮುಖ್ಯವಲ್ಲ. ಅಭಿನಯ ಮಾಡಿದ್ದು ಮುಖ್ಯ. ಇದು ಕರ್ನಾಟಕ ರಾಜ-ಕೀಯದಲ್ಲಿ ತಲೆ ತಗ್ಗಿಸುವ ಕೆಲಸವಾಗಿದು ಇಡೀ ದೇವೇಗೌಡರ ಕುಟುಂಬ ರಾಜ-ಕೀಯಕ್ಕೆ ರಾಜೀನಾಮೆ ಕೊಡಬೇಕು ಎಂದು ಮಾಜಿ ಸಿಎಂ ವೀರಪ್ಪ ಮೊಯ್ಲಿ ಒತ್ತಾಯಿಸಿದರು.

ಶಾಸಕರಾದ ಆಸೀಫ್ ಸೇಠ್, ನಾಗರಾಜ ಯಾದವ, ಮಾಜಿ ಸಚಿವ ಅಭಯಚಂದ್ರ ಜೈನ್, ವಿನಯ ನಾವಲಗಟ್ಟಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಈ ಚುನಾವಣೆ ಸಂವಿಧಾನ, ಪ್ರಜಾಪ್ರಭುತ್ವದ ಅಳಿವು ಉಳಿವಿನ ಪ್ರಶ್ನೆ: ಡಾ.ಡಿ. ಎಸ್. ಚೌಗಲೆ



ಬೆಳಗಾವಿ: ಈ ದೇಶದ ಮಣ್ಣಿನಲ್ಲಿ ದ್ವೇಷವಿಲ್ಲ ಪ್ರೀತಿಯ ಸಾಗರವೇ ಅಡಗಿದೆ. ಪರೀಕ್ಷಿಸಿದರೇ ಬಹುತ್ವದ ಡಿಎನ್ಎನೇ ದೊರಕುತ್ತದೆ. ಹೀಗಾಗಿ ಅಧಿಕಾರದ ಚುಕ್ಕಾಣಿ ಹಿಡಿಯಲು ಧರ್ಮದ ಹೆಸ-ರಿನಲ್ಲಿ ಮತ ಕೇಳುವವರಿಂದ ಜನರು ಎಚ್ಚರವಿರಬೇಕು. ಕೋಮು ಧೃವೀಕರಣದ ಮೂಲಕ ಆಳುವ ಯತ್ನವನ್ನು ಪ್ರಜ್ಞಾವಂತ ಮತದಾರ ಹೊಡೆದು ಹಾಕಬೇಕಾಗಿದೆ ಎಂದು ನಾಟಕಕಾರ ಡಾ. ಡಿ. ಎಸ್. ಚೌಗಲೆ ಹೇಳಿದರು.

ಹುದಲಿಯಲ್ಲಿ ಆಯೋಜಿಸಿದ ಎದ್ದೇಳು ಕರ್ನಾಟಕದ "ನಾಡ ಉಳಿಸುವ ಮಹಾ ಕಾಯಕ"ದ ಅಭಿಯಾನದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಈ ಚುನಾವಣೆ ತುಂಬಾ ಮಹತ್ವದ್ದು. ಇದು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಅಳಿವು ಉಳಿವಿನ ಪ್ರಶ್ನೆಯ ಚುನಾವಣೆ ಆಗಿದೆ. 'ಸಂವಿಧಾನವನ್ನು ಬದಲಿಸಲು ಬಂದಿದ್ದೇವೆ' ಎಂಬುವವರಿಂದ ಎಚ್ಚರವಿರಬೇಕು. ತಮ್ಮ ಸಾಧನೆ ಎದುರಿಟ್ಟು ಮತ ಕೇಳಬೇಕೇ ಹೊರತು ಭಾವನಾತ್ಮಕವಾಗಿ ಕೇಳಬಾರದು. ಎಂದು ಡಾ ಚೌಗಲೆ ನುಡಿದರು.

ಸಿದಗೌಡ ಮೋದಗಿ ಪ್ರಾಸ್ತಾವಿಕವಾಗಿ ಮಾತನಾಡಿ, 2024 ರ ಲೋಕಸಭಾ ಚುನಾವಣೆ ರೈತರು, ಕೃಷಿಕರು, ಕೂಲಿಗಳು, ಕಾರ್ಮಿಕರು ನೆಲೆಯಲ್ಲಿ ಮಹತ್ವದ ಚುನಾವಣೆ ಆಗಿದೆ. ಆದಕಾರಣ ನೀವು ಯೋಚಿಸಿ ಮತ ಚಲಾಯಿಸುವ ಅಗತ್ಯವಿದೆ ಎಂದರು. ತದನಂತರ ಹುದಲಿ ಗ್ರಾಮದಲ್ಲಿ ಎದ್ದೇಳು ಕರ್ನಾಟಕದ 'ನಾಡ ಉಳಿಸುವ ಮಹಾಕಾಯಕ'ದ ಚುನಾವಣಾ ಜಾಗರದ ಮಾಹಿತಿ ಪತ್ರವನ್ನು ಹಂಚಿದರು.

ಜಿಪ ಕೆಡಿಪಿ ಸದಸ್ಯ ಯಲ್ಲಪ್ಪ ತಲ್ಲೂರಿ, ಸಾಮಾಜಿಕ ಕಾರ್ಯಕರ್ತ ಯಾಸೀನ್ ಮಕಾನದಾರ, ಸಿಐಟಿಯು ನ ಮಂದಾ ನೇವಗಿ, ಮೀನಾಕ್ಷಿ ಧಪಡಿ ವೇದಿಕೆಯಲ್ಲಿದ್ದರು.

## ಅರ್ಜಿ ಆಹ್ವಾನ

ಬೆಳಗಾವಿ: ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ, ತರಬೇತಿ ಸಂಸ್ಥೆಯು ಮೇ ತಿಂಗಳಿನ ಎರಡನೇ ವಾರದಲ್ಲಿ 30 ದಿನಗಳ ಘರೇಲು ವಿದ್ಯುತ್ ಉಪಕರಣ ಸೇವಾ ಉದ್ಯಮಿ (ಹೌಸ್ ವೈರಿಂಗ್) ತರಬೇತಿಯು ಪ್ರಾರಂಭವಾಗಲಿದ್ದು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

18 ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಗೆ ಮೊದಲ ಆದ್ಯತೆ ನೀಡಲಾಗುವುದು.

ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುತ್ತದೆ.

ಆಸಕ್ತರು ಮೇ.05 ಒಳಗಾಗಿ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ ಅಥವಾ ಸಂಸ್ಥೆಯ ದೂ. 9980510717, 9483485489 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.4 ರಂದು ಮತದಾನ ಜಾಗೃತಿ ಬುಲೆಟ್ ರ್ಯಾಲಿ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣೆ ಅಂಗವಾಗಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ಜಿಲ್ಲಾ ಸ್ವೀಪ್ ಸಮಿತಿ ಇವರ ವತಿಯಿಂದ ಮೇ.4 ರಂದು ಬೆಳಗ್ಗೆ 8 ಗಂಟೆಗೆ ಮತದಾನ ಜಾಗೃತಿ ಹಮ್ಮಿಕೊಳ್ಳಲಾಗಿದೆ.

ಮತದಾನ ಜಾಗೃತಿ ಮೂಡಿಸುವ ಸಲುವಾಗಿ ಚೆನ್ನಮ್ಮ ವೃತ್ತದಿಂದ ಗೋವಾವೇಸ್, ಶಿವಾಜಿ ಗಾರ್ಡನ್, ಪಾಟೀಲ ಗಲ್ಲಿ, ಆರ್‌ಟಿಓ ಸರ್ಕಲ್‌ವರೆಗೆ ಬುಲೆಟ್ ರ್ಯಾಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೃಣಾಲ್ ಹೆಬ್ಬಾಳಕರ್ ಗೆಲುವು ಶತಸಿದ್ಧ: ಶಾಸಕ ಪ್ರದೀಪ್ ಈಶ್ವರ್



ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಮಾರ್ಗದರ್ಶನದಲ್ಲಿ ರಾಜಕೀಯ ಜೀವನ ಆರಂಭಿಸಿರುವ ಮೃಣಾಲ್ ಹೆಬ್ಬಾಳಕರ್ ಜಿಲ್ಲೆಯ ಭವಿಷ್ಯದ ನಾಯಕನಾಗಿದ್ದು, ಇಂತಹ ಯುವಕನಿಗೊಂದು ಅವಕಾಶ ಕೊಡಿ ಎಂದು ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಜೊತೆಗೂಡಿ ಕೆಎಲ್ಇ ವಿಶ್ವವಿದ್ಯಾಲಯದ ಮೆಡಿಕಲ್ ಕಾಲೇಜು, ಆಯುರ್ವೇದ ಕಾಲೇಜು ಹಾಗೂ ಇಂಜಿನಿಯ-ರಿಂಗ್ ಕಾಲೇಜುಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಪರ ಮತಯಾಚಿಸಿದ ಅವರು, ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಮೃಣಾಲ್ ಹೆಬ್ಬಾಳಕರ್ ಅವರಿಗೆ ಇನ್ನು 40-50 ವರ್ಷ ರಾಜಕೀಯ ಮಾಡುವ ಹಂಬಲವಿದೆ. ಗೆದ್ದಮೇಲೆ ಎಲ್ಲರಿಗೂ ಸ್ಪಂದಿಸುವ ವ್ಯಕ್ತಿ. ತಾಯಿಯಂತೆ ಅಭಿವೃದ್ಧಿ ಬಗ್ಗೆ ಕನಸು ಕಟ್ಟಿಕೊಂಡಿದ್ದಾನೆ.

ಇಡೀ ದೇಶದ ಅತಿ ದೊಡ್ಡ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯನ್ನು ಅನುಷ್ಠಾನಕ್ಕೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದವರು ಸಚಿವೆ ಲಕ್ಷ್ಮೀ ಹೆಬ್ಬಾಳಕರ್. ಈ ಯೋಜನೆ ಜಾರಿಗಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕೊಡುಗೆ ಅಪಾರ ಎಂದರು.

ದೇಶ ಕಟ್ಟಿದ್ದು ಕಾಂಗ್ರೆಸ್ ಪಕ್ಷ, ಆಹಾರ ಭದ್ರತಾ ಕಾಯ್ದೆ ತಂದಿದ್ದು ನಾವು, ಸರ್ಕಾರದ ಸ್ವಾಮ್ಯದ ಕಂಪನಿಗಳು, ರೈಲ್ವೆ, ಐಐಟಿ ಸೇರಿದಂತೆ ಹಲವು ಕಾಲೇಜು, ವಿಶ್ವವಿದ್ಯಾಲಯಗಳನ್ನು ಕಟ್ಟಿದ್ದು ಕಾಂಗ್ರೆಸ್ ಪಕ್ಷ ಎಂದು ಶಾಸಕ ಪ್ರದೀಪ್ ಈಶ್ವರ್ ಹೇಳಿದರು.

ಬೆಳಗಾವಿ ಕೇವಲ ಮಾತಿಗಷ್ಟೇ ಎರಡನೇ ರಾಜಧಾನಿ ಆಗಬಾರದು. ಅಭಿವೃದ್ಧಿಯಲ್ಲೂ ಜಿಲ್ಲೆ ಬೆಳೆಯಬೇಕು.

ಮಹಿಳಾ ಮೀಸಲಾತಿ ಜಾರಿಗೆ ಬಂದರೆ ನಮ್ಮ ಲಕ್ಷ್ಮೀ ಮೇಡಂ ಅವರಿಗೆ ಮುಖ್ಯಮಂತ್ರಿ ಆಗುವ ಯೋಗವು ಬರಲಿದೆ ಎಂದು ಹೇಳಿದರು.

ಮಾಜಿ ರಾಜ್ಯಸಭಾ ಸದಸ್ಯ ಹಾಗೂ ಬೆಂಗಳೂರು ಉತ್ತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜೀವ್ ಗೌಡ, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್, ಕೆಎಲ್ ಇ ವಿವಿಯ ಆಜೀವ ಸದಸ್ಯರಾದ ಡಾ.ವಿ.ಎಸ್. ಸಾಧುನವರ್ ಉಪಸ್ಥಿತರಿದ್ದರು.

## ಅಪಘಾತ: ಮೂವರ ಸಾವು




ಬೀದರ್: ಬೀದರ್ ನಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ವಿದ್ಯುತ್ ಕಂಬಕ್ಕೆ ಕ್ರೂಸರ್ ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ.

ಬೀದರ್ ತಾಲೂಕಿನ ಚಟ್ನಳ್ಳಿ ಗ್ರಾಮದ ಬಳಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತರನ್ನು ಪ್ರದೀಪ್ (25) ವರ್ದೀಶ್ (25) ಎಂದು ಗುರುತಿಸಲಾಗಿದೆ. ಇಬ್ಬರಿಗೆ ಗಂಭೀರ ಗಾಯವಾಗಿದ್ದು, ಬೀದರ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಲಕ್ಷ್ಮೀ ಹೆಬ್ಬಾಳಕರ್ ಮನೆವರೆಗೂ ಬಂದು ಕೃತಜ್ಞತೆ ಸಲ್ಲಿಸಿದ ನೇಹಾ ಹಿರೇಮಠ ತಂದೆ-ತಾಯಿ

## ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸಿ ಎಂದು ಮನವಿ ಮಾಡಿದ ನಿರಂಜನ ಹಿರೇಮಠ

ಬೆಳಗಾವಿ: ಮಗಳ ಹತ್ಯೆಯಾದ ಸಂದರ್ಭದಲ್ಲಿ ಮನೆಗೆ ಆಗಮಿಸಿ ಸಾಂತ್ವನ ಹೇಳಿದ್ದಲ್ಲದೆ ಸರಕಾರದಿಂದ ಆಗಬೇಕಾದ ಕೆಲಸಗಳನ್ನು ಅತ್ಯಂತ ತ್ವ-ರಿತವಾಗಿ ಮಾಡಿಸಿಕೊಟ್ಟಿರುವುದಕ್ಕಾಗಿ ನೇಹಾ ಹಿರೇಮಠ ಅವರ ತಂದೆ -ತಾಯಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಬೆಳಗಾವಿಯ ಮನೆಗೆ ಬಂದು ಕೃತಜ್ಞತೆ ಸಲ್ಲಿಸಿದರು.

ಗುರುವಾರ ಸಂಜೆ ಆಗಮಿಸಿದ ನಿರಂಜನ ಹಿರೇಮಠ ದಂಪತಿ, ಲಕ್ಷ್ಮೀ ಹೆಬ್ಬಾಳಕರ್ ಅವ-ರಿಗೆ ಮನಃಪೂರ್ವಕ ಧನ್ಯವಾದ ಸಲ್ಲಿಸಿದರು. ಜೊತೆಗೆ ಬೆಳಗಾವಿ ಕ್ಷೇತ್ರದಿಂದ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ಬೆಂಬಲಿಸುವಂತೆ ಜನರಲ್ಲಿ ಮನವಿ ಮಾಡಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ನಿರಂಜನ ಹಿರೇಮಠ, ನಮ್ಮ ಕಷ್ಟಕಾಲದಲ್ಲಿ ತಮ್ಮೆಲ್ಲ ಕೆಲಸಗಳನ್ನು ಬಿಟ್ಟು ಲಕ್ಷ್ಮೀ ಹೆಬ್ಬಾಳಕರ್ ಅವರು ಸುರಿಯುತ್ತಿದ್ದ ಮಳೆಯ ಮಧ್ಯೆಯೂ ನಮ್ಮ ಮನೆಗೆ ಬಂದು ನಮ್ಮ ದುಃಖದಲ್ಲಿ ಭಾಗಿಯಾದರು. ಜೊತೆಗೆ ನಮಗೆ ಭದ್ರತೆ ಒದಗಿಸುವ, ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸುವ ಮತ್ತು ಪ್ರಕರಣದ ತನಿಖೆಗೆ ತ್ವರಿತಗತಿ ನ್ಯಾಯಾಲಯ ಸ್ಥಾಪನೆ ಮಾಡುವ ಕೆಲಸ ಮಾಡಿದರು. ಹಾಗಾಗಿ ಅವರಿಗೆ ಕೃತಜ್ಞತೆ ಸಲ್ಲಿಸಬೇಕೆಂದು ನಾವು ಇಲ್ಲಿಯವರೆಗೂ ಬಂದಿದ್ದೇವೆ ಎಂದು ತಿಳಿಸಿದರು.

ನಮ್ಮ ಕಷ್ಟ ಕಾಲದಲ್ಲಿ ಪಕ್ಷಭೇದ ಮರೆತು, ಜಾತಿ ಭೇದ ಮರೆತು ಎಲ್ಲರೂ ನಮ್ಮ ನೆರವಿಗೆ ನಿಂತಿದ್ದಾರೆ. ಈ ಘಟನೆಯನ್ನು ರಾಜಕೀಯಕ್ಕೆ ಬಳಸಬಾರದೆಂದು ನಾನು ಮನವಿ ಮಾಡಿದ್ದೆ. ಆ ರೀತಿ ಕೆಲವರು ಬಳಸುತ್ತಿರುವುದಕ್ಕೆ ಬೇಸರವಾಗಿದೆ. ಆದರೆ ಲಕ್ಷ್ಮೀ ಹೆಬ್ಬಾಳಕರ್ ಅವರು ಯಾವ ಸ್ವಾರ್ಥವಿಲ್ಲದೆ ತಮ್ಮದೇ ಮಗಳು ಎನ್ನುವಂತೆ ಬಂದು ನಮ್ಮೊಂದಿಗೆ ನಿಂತಿದ್ದಾರೆ. ಅವರ ನೆರವನ್ನು ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ನಿರಂಜನ ಹಿರೇಮಠ ಹೇಳಿದರು.



**ಫೋಟೋ ದುರ್ಬಳಕೆ ಸಲ್ಲದು:**

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು 3 ವರ್ಷದ ಹಿಂದೆ ಕಾರ್ಯಕ್ರಮವೊಂದರಲ್ಲಿ ಫಯಾಜ್ ಗೆ ಸನ್ಮಾನ ಮಾಡುವ ಸಂದರ್ಭದಲ್ಲಿ ಹಾಜ-ರಿದ್ದ ಫೋಟೋವನ್ನು ಬಿಜೆಪಿಯವರು ರಾಜಕೀಯಕ್ಕೆ ಬಳಸಿಕೊಳ್ಳುತ್ತಿರುವ ಕುರಿತು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ನಿರಂಜನ ಹಿರೇಮಠ, ನಾವು ರಾಜಕಾರಣಿಗಳು ಎಲ್ಲೆ ಕಾರ್ಯಕ್ರಮಕ್ಕೆ ಕರೆದರೆ ಹೋಗುತ್ತೇವೆ. ಅಲ್ಲಿ ಯಾರ್ಯಾರಿಗೋ ಸನ್ಮಾನ ಮಾಡುತ್ತಾರೆ. ಅಂದು ಸಾಧನೆ ಮಾಡಿ ಸನ್ಮಾನಿಸಿಕೊಂಡವರು ಮುಂದೆ ಒಳ್ಳೆಯ ವ್ಯಕ್ತಿಗಳೂ ಆಗಬಹುದು, ಕ್ರಿಮಿನಲ್ ಗಳೂ ಆಗಬಹುದು. ಅದು ನಮಗೆ ಹೇಗೆ ಗೊತ್ತಾಗುತ್ತದೆ? ಆದರೆ ಇಂತಹ ಫೋಟೋಗಳನ್ನೆಲ್ಲ ಈ ರೀತಿ ರಾಜ-ಕೀಯಕ್ಕಾಗಿ ದುರ್ಬಳಕೆ ಮಾಡಿಕೊಳ್ಳುವುದು ತಪ್ಪು ಎಂದು ಹೇಳಿದರು.

ಹೆಣ್ಣು ಮಕ್ಕಳಿಗೆ ಅನ್ಯಾಯವಾದ ಸಂದರ್ಭದಲ್ಲಿ ಅದನ್ನು ಖಂಡಿಸುವುದು, ಪ್ರತಿಭಟಿಸುವುದು ಸರಿ, ಆದರೆ ಅದನ್ನು ರಾಜ-ಕೀಯಕ್ಕಾಗಿ ಬಳಸಿಕೊಳ್ಳಬಾರದು. ಅವರದೇ ಮನೆಯ ಹೆಣ್ಣು ಮಗಳಿಗೆ ಈ ರೀತಿಯಾದರೆ ಅವರು ರಾಜಕೀಯ ಮಾಡುತ್ತಾರಾ ಎಂದು ಅವರು ಪ್ರಶ್ನಿಸಿದರು.

**ಪ್ರಜ್ವಲ್ ರೇವಣ್ಣನವರನ್ನು 3 ಸಾವಿರ ತುಂಡು ಮಾಡಿ ಸಂತ್ರಸ್ತರಿಗೆ ಹಂಚಿ:**

ಪ್ರಜ್ವಲ್ ರೇವಣ್ಣ ಲೈಂಗಿಕ ಹಗರಣವನ್ನು ಕಟುವಾಗಿ ಖಂಡಿಸಿದ ನಿರಂಜನ ಹಿರೇಮಠ, ಅವರಿಗೆ ಎಂತಹ ಶಿಕ್ಷೆ ಕೊಟ್ಟರೂ ಕಡಿಮೆಯೇ. ಅವರನ್ನು ತುಂಡು ತುಂಡು ಮಾಡಿ ಸಂತ್ರಸ್ತ 3 ಸಾವಿರ ಹೆಣ್ಣು ಮಕ್ಕಳಿಗೆ ಹಂಚಬೇಕು ಎಂದು ಆಕ್ರೋಶದಿಂದ ನುಡಿದರು. ಈ ಘಟನೆಯ ವಿರುದ್ಧ ಶೀಘ್ರದಲ್ಲೇ ನಾವೂ ಪ್ರತಿಭಟನೆ ನಡೆಸಲಿದ್ದೇವೆ ಎಂದು ತಿಳಿಸಿದರು.

**ಮೃಣಾಲ್ ಗೆ ಬೆಂಬಲಿಸಿ ಎಂದು ಮನವಿ:**

ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿರುವ ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸುವಂತೆ ಮನವಿ ಮಾಡಿದ ನಿರಂಜನ ಹಿರೇಮಠ, ಇಂತಹ ಯುವ ಸಂಸದರಿದ್ದರೆ ಹೆಣ್ಣು ಮಕ್ಕಳಿಗೆ ಅನ್ಯಾಯವಾದಾಗ ಧ್ವನಿ ಎತ್ತುತ್ತಾರೆ. ನಮಗೆ ನ್ಯಾಯ ಒದಗಿಸುತ್ತಾರೆ. ಹಾಗಾಗಿ ಸಮಾಜದ ಎಲ್ಲರೂ ಅವರನ್ನು ಬೆಂಬಲಿಸಬೇಕು ಎಂದು ಕೈ ಮುಗಿದು ಮನವಿ ಮಾಡುತ್ತೇನೆ ಎಂದು ತಿಳಿಸಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089